ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಕನ್ನಡ ಮಾಸಪತ್ರಿಕೆ

# ಸಹಕಾರ

ಮಾಸಪತ್ರಿಕೆ

ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ ಪ್ರಕಟಣೆ

ಸಂಪುಟ : 6 । ಸಂಚಿಕೆ : 12 । ಡಿಸೆಂಬರ್ 2024 । ಪುಟಗಳು : 20 । ಬೆಲೆ : 25/-

## ಬೆಂಗಳೂರಿನಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹದ ಉದ್ಘಾಟನೆ



## ದೇಶದ ಆರ್ಥಿಕತೆಗೆ ಸಹಕಾರ ವಲಯದ ಕೊಡುಗೆ ಅಪಾರ

## ಬೀದರ್ ಜಿಲ್ಲೆಯಲ್ಲಿ ಹೈನುಗಾರಿಕೆಗೆ ವಿಪುಲ ಅವಕಾಶ : ಅರಣ್ಯ ಸಚಿವ ಈಶ್ವರ ಖಂಡ್ರೆ



# ನವದೆಹಲಿಯಲ್ಲಿ ಅಂತಾರಾಷ್ಟ್ರೀಯ ಸಹಕಾರಿ ವರ್ಷ 2025ಕ್ಕೆ ಚಾಲನೆ
# ಜಾಗತಿಕ ಸಹಕಾರ ಚಳವಳಿಗೆ ಭಾರತದ ಕೊಡುಗೆ ಅನನ್ಯ–ಪ್ರಧಾನಿ ನರೇಂದ್ರ ಮೋದಿ




**ನವದೆಹಲಿ :** ಜಾಗತಿಕ ಸಹಕಾರ ಚಳವಳಿಗೆ ಭಾರತ ದೇಶದ ಕೊಡುಗೆ ಅನನ್ಯವಾಗಿದೆ ಮತ್ತು ಸಹಕಾರಿ ಸಂಸ್ಥೆಗಳು ಕೇವಲ ಸಾಂಸ್ಥಿಕ ರಚನೆಗಳಲ್ಲ, ಸಹಕಾರ ಮತ್ತು ಪರಸ್ಪರ ಪ್ರಗತಿಯ ಭಾರತದ ಸಾಂಸ್ಕೃತಿಕ ನೀತಿಗಳನ್ನು ಸಾಕಾರಗೊಳಿಸುತ್ತವೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಹೇಳಿದರು.

ಅಂತಾರಾಷ್ಟ್ರೀಯ ಸಹಕಾರ ಮೈತ್ರಿ ಸಂಸ್ಥೆ ಹಾಗೂ ಇಫ್ಕೊ ನೇತೃತ್ವದಲ್ಲಿ ಆಯೋಜಿಸಿದ್ದ 2024ನೇ ಜಾಗತಿಕ ಸಹಕಾರ ಸಮ್ಮೇಳನವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಉದ್ಘಾಟಿಸಿ ಮಾತನಾಡಿದ ಅವರು, ಮಹಾತ್ಮಾ ಗಾಂಧಿಯವರ ಗ್ರಾಮ ಸ್ವರಾಜ್ ಮತ್ತು ಸರ್ದಾರ್ ಪಟೇಲ್ ಅವರ ಸಹಕಾರ ಆಂದೋಲನಗಳು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಸಮುದಾಯಗಳನ್ನು ಹೇಗೆ ಸಬಲಗೊಳಿಸಿದವು ಎಂಬುದನ್ನು ಉಲ್ಲೇಖಿಸಿದ ಅವರು ಭಾರತದ ಸ್ವಾತಂತ್ರ್ಯ ಹೋರಾಟದ ಸಮಯದಲ್ಲಿ ಸಹಕಾರಿಗಳ ಪಾತ್ರವನ್ನು ಸ್ಮರಿಸಿದರು. ಸ್ವಾತಂತ್ರ್ಯ ಚಳವಳಿಯಿಂದ ನಂತರ ಜನ್ಮತಾಳಿದ ಅಮುಲ್ ಇಂದು ಸಹಕಾರಿ ರಂಗದ ಯಶಸ್ಸನ್ನು ಸಾಂಕೇತಿಸುವ ಜಾಗತಿಕ ಬ್ರಾಂಡ್ ಆಗಿ ನಿಂತಿದೆ ಎಂದು ಪ್ರಧಾನಿ ಹೇಳಿದರು.

ಭಾರತದ ಸಹಕಾರಿ ಕ್ಷೇತ್ರವು ಜಾಗತಿಕವಾಗಿ ಅತಿ ದೊಡ್ಡದಾಗಿದೆ, ಶೇ.98 ರಷ್ಟು ಗ್ರಾಮೀಣ ಪ್ರದೇಶಗಳನ್ನು ಒಳಗೊಂಡಿದೆ ಮತ್ತು 8.50 ಲಕ್ಷಕ್ಕೂ ಹೆಚ್ಚು ಸಹಕಾರಿ ಸಂಘಗಳ ಮೂಲಕ 30 ಕೋಟಿ ಸದಸ್ಯ ಬಳಗ ಹೊಂದಿದೆ. ಕೃಷಿ, ಸಕ್ಕರೆ, ಹಾಲು ಉತ್ಪಾದನೆ, ರಸಗೊಬ್ಬರಗಳು ಮತ್ತು ವಸತಿ ಮುಂತಾದ ಸಹಕಾರ ಕ್ಷೇತ್ರದ ಸಾಧನೆಗಳನ್ನು ಶ್ಲಾಘಿಸಿದರು.

ಭಾರತೀಯ ರಿಸರ್ವ್ ಬ್ಯಾಂಕ್ ನಿಯಂತ್ರಣದ ಅಡಿಯಲ್ಲಿ ಸಹಕಾರಿ ಬ್ಯಾಂಕುಗಳನ್ನು ತರುವುದು ಮತ್ತು ಠೇವಣಿ ಮೇಲಿನ ವಿಮಾ ವ್ಯಾಪ್ತಿಯನ್ನು ರೂ.5 ಲಕ್ಷಕ್ಕೆ ಹೆಚ್ಚಿಸುವುದು ಮುಂತಾದ ಮಹತ್ವದ ಸುಧಾರಣೆಗಳನ್ನು ತಿಳಿಸಿದರು. ಇದು ಸಾರ್ವಜನಿಕ ನಂಬಿಕೆ ಮತ್ತು ಆರ್ಥಿಕ ಪಾರದರ್ಶಕತೆಯನ್ನು ಹೆಚ್ಚಿಸಿದೆ ಎಂದು ಅಭಿಪ್ರಾಯಪಟ್ಟರು.

ಸಹಕಾರಿ ಸಂಸ್ಥೆಗಳ ಮೂಲಕ ಮಹಿಳೆಯರನ್ನು ಸಬಲೀಕರಣಗೊಳಿಸುವ ಮಹತ್ವವನ್ನು ಪ್ರಧಾನಮಂತ್ರಿಯವರು ಶ್ಲಾಘಿಸಿದರು. ಭಾರತದಲ್ಲಿ ಶೇ.60ಕ್ಕಿಂತ ಹೆಚ್ಚು ಸಹಕಾರಿ ಸದಸ್ಯರನ್ನು ಮಹಿಳೆಯರು ಹೊಂದಿದ್ದಾರೆ. 10 ಕೋಟಿ ಮಹಿಳೆಯರು ಸ್ವ–ಸಹಾಯ ಗುಂಪುಗಳಲ್ಲಿ (ಎಸ್‌ಎಚ್‌ಜಿ) ಭಾಗವಹಿಸುವ ಪರಿವರ್ತನಾ ಪ್ರಭಾವವನ್ನು ಅವರು ಶ್ಲಾಘಿಸಿದರು, ಇದು ಒಟ್ಟು 9ಲಕ್ಷ ಕೋಟಿ ರೂಪಾಯಿಗಳ ಸರ್ಕಾರದ ಸಾಲದಿಂದ ಬೆಂಬಲಿತವಾಗಿದೆ, ಇದು ಗ್ರಾಮೀಣ ಅಭಿವೃದ್ಧಿ ಮತ್ತು ಸಂಪತ್ತು ಸೃಷ್ಟಿಗೆ ವೇಗವರ್ಧಿಸಿದೆ ಎಂದರು.

ಸಣ್ಣ ರೈತರಿಗೆ, ಪೂರೈಕೆ ಸರಪಳಿಗಳನ್ನು ಸುಗಮಗೊಳಿಸಲು ಮತ್ತು ಮಾರುಕಟ್ಟೆ ಪ್ರವೇಶವನ್ನು ಸುಧಾರಿಸಲು ಸುಮಾರು 9,000 ರೈತ ಉತ್ಪಾದಕ ಸಂಸ್ಥೆಗಳನ್ನು (ಎಫ್‌ಪಿಒ) ರಚಿಸುವ ಸರ್ಕಾರದ ಪ್ರಯತ್ನಗಳನ್ನು ಪ್ರಧಾನಿ ಮೋದಿ ವಿವರಿಸಿದರು. ಭಾರತದ ಮಹತ್ವಾಕಾಂಕ್ಷೆಯ ಧಾನ್ಯ ಸಂಗ್ರಹಣಾ ಯೋಜನೆಯನ್ನೂ ಬಗ್ಗೆ ವಿವರಿಸಿದರು. ಇದರ ಅಡಿಯಲ್ಲಿ ಸಣ್ಣ ರೈತರಿಗೆ ಅನುಕೂಲವಾಗುವಂತೆ ಸಹಕಾರಿ ಸಂಸ್ಥೆಗಳು ರಾಷ್ಟ್ರವ್ಯಾಪಿ ಗೋದಾಮುಗಳನ್ನು ನಿರ್ಮಿಸುತ್ತಿವೆ ಎಂದರು.

ಕೇಂದ್ರ ಗೃಹ ಸಚಿವ ಮತ್ತು ಸಹಕಾರ ಸಚಿವರಾದ ಅಮಿತ್ ಶಾ ಅವರು ಮಾತನಾಡಿ, ಕಳೆದ ಮೂರು ವರ್ಷಗಳಲ್ಲಿ ಸಹಕಾರ ಸಚಿವಾಲಯವು ಸಾಧಿಸಿದ ಪ್ರಗತಿಯನ್ನು ವಿವರಿಸಿದರು. ಸಹಕಾರ ವಲಯವು ಜಾಗತಿಕವಾಗಿ ಲಕ್ಷಾಂತರ ಬಡವರು ಮತ್ತು ರೈತರಿಗೆ ವರದಾನವಾಗಿದೆ. ಮುಂಬರುವ ವರ್ಷಗಳಲ್ಲಿ ಸಹಕಾರಿ ಕ್ಷೇತ್ರಕ್ಕೆ ಮಹತ್ವಾಕಾಂಕ್ಷೆಯ ಯೋಜನೆಗಳನ್ನು ವಿವರಿಸಿದರು. 2ಲಕ್ಷ ಹೊಸ ಪ್ರಾಥಮಿಕ ಕೃಷಿ ಸಾಲ ಸಂಘಗಳನ್ನು (PACS) ಸ್ಥಾಪಿಸುವುದು. ತಂತ್ರಜ್ಞಾನದೊಂದಿಗೆ ಪ್ಯಾಕ್ಸ್‌ಗಳನ್ನು ಆಧುನೀಕರಿಸಲು ಮತ್ತು ಅವುಗಳನ್ನು ಆರ್ಥಿಕವಾಗಿ ಸಶಕ್ತಗೊಳಿಸಲು ನಡೆಯುತ್ತಿರುವ ಪ್ರಯತ್ನಗಳ ಬಗ್ಗೆ ವಿವರಿಸಿದರು. ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ, ಪ್ರತಿಯೊಬ್ಬ ವ್ಯಕ್ತಿ ಮತ್ತು ಕ್ಷೇತ್ರವನ್ನು ತಲುಪಲು ಸಹಕಾರಿ ಆಂದೋಲನವನ್ನು ವಿಸ್ತರಿಸುವಲ್ಲಿ ಮಹತ್ವದ ದಾಪುಗಾಲು ಹಾಕಲಾಗಿದೆ. ಹಿಂದುಳಿದ ಸಮುದಾಯಗಳನ್ನು ವಿಶೇಷವಾಗಿ ಮಹಿಳೆಯರು, ರೈತರು ಮತ್ತು ಹಳ್ಳಿಗಳನ್ನು ಸಬಲೀಕರಣಗೊಳಿಸಲು ಸಹಕಾರಿ ಸಂಸ್ಥೆಗಳು ಹೊಸ ಮಾರ್ಗಗಳನ್ನು ತೆರೆದಿವೆ ಎಂದು ಅಮಿತ್ ಶಾ ಒತ್ತಿ ಹೇಳಿದರು.

ಭೂತಾನ್‌ನ ಪ್ರಧಾನಿ ದಾಶೋ ಶೆರಿಂಗ್ ಟೋಬ್‌ಗೇ, ಫಿಜಿಯ ಉಪಪ್ರಧಾನಿ ಮನೋವಾ ಕಾಮಿಕಾಮಿಕಾ ಮತ್ತು ಇಂಟರ್‌ನ್ಯಾಶನಲ್ ಕೋಆಪರೇಟಿವ್ ಅಲೈಯನ್ಸ್ ಅಧ್ಯಕ್ಷ ಏರಿಯತ್ ಗ್ವಾರ್ಕೋ, ಇಫ್ಕೊ ಅಧ್ಯಕ್ಷ ದಿಲೀಪ್ ಸಂಘಾನಿ, ಹಿರಿಯ ಸಹಕಾರಿ ಮುಖಂಡರು ಉಪಸ್ಥಿತರಿದ್ದರು.

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಆಡಳಿತ ಮಂಡಳಿ



ಶಿದ್ದನಗೌಡ ಸಂಣರಾಮನಗೌಡ ಪಾಟೀಲ
ಸಹಕಾರಿ ಪಿತಾಮಹ



ಶ್ರೀ ಬಿ.ಎಲ್. ಲಕ್ಕೇಗೌಡರು
ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಸಂಸ್ಥಾಪಕ ಅಧ್ಯಕ್ಷರು



ಶ್ರೀ ವಿ. ರಾಜು
ಅಧ್ಯಕ್ಷರು



ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ
ಉಪಾಧ್ಯಕ್ಷರು



ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ
ನಿರ್ದೇಶಕರು



ಶ್ರೀ ಸಿ.ಎಂ. ಮಾರೇಗೌಡ
ನಿರ್ದೇಶಕರು



ಡಾ. ಬಿ.ಡಿ. ಭೂಕಾಂತ
ನಿರ್ದೇಶಕರು



ಡಾ. ಸಂಜಯ ಪಂ. ಹೊಸಮಠ
ನಿರ್ದೇಶಕರು



ಶ್ರೀ ಎಂ.ಜಿ. ನರೇಂದ್ರ ಕುಮಾರ
ನಿರ್ದೇಶಕರು



ಶ್ರೀ ಡಿ. ಚನ್ನಯ್ಯ
ನಿರ್ದೇಶಕರು



ಶ್ರೀ ಕೆ. ಕೃಷ್ಣಮೂರ್ತಿ
ನಿರ್ದೇಶಕರು



ಶ್ರೀ ಜಿ. ಮಲ್ಲಿಕಾರ್ಜುನಯ್ಯ
ನಿರ್ದೇಶಕರು



ಶ್ರೀ ತಮ್ಮಣ್ಣ ಬಿ. ಕೆಂಚರಡ್ಡಿ
ನಿರ್ದೇಶಕರು



ಶ್ರೀ ಧರೇಪ್ಪ ಎಂ. ಆಲಗೂರ
ನಿರ್ದೇಶಕರು




ಶ್ರೀ ಗುರುಪಾದಪ್ಪಗೌಡ ಬ. ಪಾಟೀಲ
ನಿರ್ದೇಶಕರು



ಶ್ರೀ ಹೊನ್ನಯ್ಯ ವಿ. ಹಿರೇಮಠ
ನಿರ್ದೇಶಕರು



ಶ್ರೀ ಪಿ.ಕೆ. ಜಯಕೃಷ್ಣೇಗೌಡ
ನಿರ್ದೇಶಕರು



ಶ್ರೀ ಶೇಖರಗೌಡ ಮಾಲಿ ಪಾಟೀಲ
ನಿರ್ದೇಶಕರು



ಶ್ರೀ ಡಿ.ಆರ್. ನಾಗೇಶಪ್ಪ
ನಿರ್ದೇಶಕರು



ಶ್ರೀ ಉಮೇಶ ಶಿ ಬಾಳಿ
ನಿರ್ದೇಶಕರು



ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ
ನಿರ್ದೇಶಕರು




ಶ್ರೀ ಚಿತ್ತರಂಜನ್ ಬೋಳಾರ್
ನಿರ್ದೇಶಕರು



ಶ್ರೀ ಪ್ರಜ್ವಲ್ ಕೆ.ಎನ್.
ಮುಖ್ಯಕಾರ್ಯನಿರ್ವಹಣಾಧಿಕಾರಿ

**SAHAKARA VARTHA PATHRIKE KANNADA MONTHLY**
RNI-Reg No. KARKAN/2018/75796
Post Reg No. KA-BGW/1816/2022-24
Posting Date : 1 and 5 Every Month
Posted at : P/C RMS Bhavan, Bangalore PSO,
Blore-26 Published On : 30th of Previous Month
License to post without prepayment
PMG BG/WPP-405/2022-2024




ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿಯಮಿತ
ಬೆಂಗಳೂರು ನಂ. 126 1ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆ, ಜೆಬಿ ಕಾವಲ್,
ರಾಜೀವ್‌ಗಾಂಧಿ ನಗರ, ನಂದಿನಿ ಲೇಔಟ್, ಬೆಂಗಳೂರು–560096

**Printed at : Biligiri Printers**
**Chamrajpet, Bengaluru - 18**

## ಸಂಪಾದಕೀಯ



ವಿ. ರಾಜು
ಅಧ್ಯಕ್ಷರು

ಸಹಕಾರ ಕ್ಷೇತ್ರದ ಬೆಳವಣಿಗೆಗೆ ಬದ್ಧತೆ ಅಗತ್ಯ ಯುವಜನರು ಮಹಿಳೆಯರು ಪಾಲ್ಗೊಳ್ಳುವುದರ ಜೊತೆಗೆ ಸಹಕಾರ ಚಳುವಳಿಯ ನೇತೃತ್ವವನ್ನು ವಹಿಸಿಕೊಳ್ಳುವಂತೆ ಸಲಹೆ ಮಾಡಿದ್ದು ಚಳವಳಿಯ ಮುಂದಿನ ತಲೆಮಾರಿನ ಬಗ್ಗೆ ಯೋಚಿಸಿದಂತೆ ಭಾಸವಾಗುತ್ತಿತ್ತು. ಸಹಕಾರ ಸಚಿವರಾದ ಕೆ.ಎನ್.ರಾಜಣ್ಣ ರವರು ಮಾತನಾಡಿ ಸಹಕಾರ ಚಳುವಳಿ ಪಕ್ಷಾತೀತವಾಗಿ, ಜಾತ್ಯತೀತವಾಗಿ ಬೆಳೆಯಬೇಕು. ಸಹಕಾರ ಡಿಪ್ಲೋಮೋ ಪದವೀಧರರಿಗೆ ಉದ್ಯೋಗದಲ್ಲಿ ಮೀಸಲು ಕಲ್ಪಿಸಬೇಕು ಎಂದು ಮನವಿ ಮಾಡಿದರು.

# ಸಹಕಾರ ಸಪ್ತಾಹ : ಪರಿಣಾಮಕಾರಿ ಆಚರಣೆ

ಕರ್ನಾಟಕ ರಾಜ್ಯದಾದ್ಯಂತ 2024ರ ನವಂಬರ್ 14 ರಿಂದ 20ರವರೆಗೆ ಏರ್ಪಡಿಸಿದ್ದು ಸಹಕಾರ ಸಪ್ತಾಹ ಕಾರ್ಯಕ್ರಮಗಳು ಅರ್ಥಪೂರ್ಣವಾಗಿ ಪರಿಣಾಮಕಾರಿಯಾಗಿ ಆಚರಣೆಗೊಂಡಿವೆ. ಬೆಂಗಳೂರಿನಲ್ಲಿ ಆರಂಭಗೊಂಡ ಸಹಕಾರ ಸಪ್ತಾಹ, ಬೆಳಗಾವಿಯಲ್ಲಿ ಸಮಾರೋಪ ಕಾರ್ಯಕ್ರಮದೊಂದಿಗೆ ಮುಕ್ತಾಯವಾಯಿತು.

ನವಂಬರ್–17 ರಂದು ಬಾಗಲಕೋಟೆಯಲ್ಲಿ ಏರ್ಪಡಿಸಿದ್ದ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪಾಲ್ಗೊಂಡು ಕಾರ್ಯಕ್ರಮ ಉದ್ಘಾಟನೆಯ ಜೊತೆಗೆ ರಾಜ್ಯದ ಸಹಕಾರ ಕ್ಷೇತ್ರದ ಬೆಳವಣಿಗೆಗೆ ಶ್ರಮಿಸುತ್ತಿರುವ ಸಾಧಕ ಸಹಕಾರಿಗಳಿಗೆ ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಿ ಅಭಿನಂದಿಸಿದರು.

ಸಹಕಾರ ಕ್ಷೇತ್ರದ ಬೆಳವಣಿಗೆಗೆ ಬದ್ಧತೆ ಅಗತ್ಯ ಯುವಜನರು ಮಹಿಳೆಯರು ಪಾಲ್ಗೊಳ್ಳುವುದರ ಜೊತೆಗೆ ಸಹಕಾರ ಚಳುವಳಿಯ ನೇತೃತ್ವವನ್ನು ವಹಿಸಿಕೊಳ್ಳುವಂತೆ ಸಲಹೆ ಮಾಡಿದ್ದು ಚಳವಳಿಯ ಮುಂದಿನ ತಲೆಮಾರಿನ ಬಗ್ಗೆ ಯೋಚಿಸಿದಂತೆ ಭಾಸವಾಗುತ್ತಿತ್ತು. ಸಹಕಾರ ಸಚಿವರಾದ ಕೆ.ಎನ್.ರಾಜಣ್ಣ ರವರು ಮಾತನಾಡಿ ಸಹಕಾರ ಚಳುವಳಿ ಪಕ್ಷಾತೀತವಾಗಿ, ಜಾತ್ಯತೀತವಾಗಿ ಬೆಳೆಯಬೇಕು. ಸಹಕಾರ ಡಿಪ್ಲೋಮೋ ಪದವೀಧರರಿಗೆ ಉದ್ಯೋಗದಲ್ಲಿ ಮೀಸಲು ಕಲ್ಪಿಸಬೇಕು ಎಂದು ಮನವಿ ಮಾಡಿದರು. ಈ ಮನವಿಗೆ ಮುಖ್ಯಮಂತ್ರಿ ಅವರು ಭರವಸೆ ನೀಡಿರುವುದು, ಸಹ ಸಹಕಾರ ಸಂಘಗಳಿಗೆ ಮುಖ್ಯಮಂತ್ರಿ ಅವರು ನೀಡುತ್ತಿರುವ ಕೊಡುಗೆ ಎಂದೇ ಭಾವಿಸಲಾಗಿದೆ. ದೇಶದ ಆಹಾರ ಭದ್ರತೆಗೆ ಸಹಕಾರ ಸಂಘಗಳ ಪಾತ್ರ ಶ್ಲಾಘನೀಯ. ಆದರೆ, ನಬಾರ್ಡ್ ಸಂಸ್ಥೆ ಬೆಳೆಸಾಲ ಕುರಿತು ರಾಜ್ಯಗಳಿಗೆ ಬಿಡುಗಡೆ ಮಾಡುತ್ತಿರುವ ಪುನರ್ಧನ ಮಿತಿ ಹಣ ಇಳಿಕೆಯಾಗುತ್ತಿರುವುದಕ್ಕೆ ಮುಖ್ಯಮಂತ್ರಿ ಸಹಕಾರ ಸಚಿವರು ಹಾಗೂ ಸಹಕಾರಿ ಮುಖಂಡರುಗಳು ವಿಷಾದ ವ್ಯಕ್ತಪಡಿಸಿದ್ದಾರೆ.

ಕೇಂದ್ರ ಸರ್ಕಾರ ಈ ಬಗ್ಗೆ ಹೆಚ್ಚಿನ ಗಮನಹರಿಸಿ ಕರ್ನಾಟಕ ರಾಜ್ಯ ಸೇರಿದಂತೆ ಎಲ್ಲಾ ರಾಜ್ಯಗಳಿಗೆ ರಿಯಾಯಿತಿ ಬಡ್ಡಿ ದರದಲ್ಲಿ ಪುನರ್ಧನ ಸಾಲ ಮಂಜೂರು ಮಾಡಲಿ ಎಂಬುದು ಎಲ್ಲಾ ಸಹಕಾರಿಗಳ ಕೋರಿಕೆ–ಆಶಯವಾಗಿದೆ.

ಕೇಂದ್ರ ಸಹಕಾರ ಸಚಿವಾಲಯವು ಇತ್ತ ಗಮನಹರಿಸಿ ಸಹಕಾರ ಸಂಘಗಳ ಜೊತೆಗೆ ರೈತರ ಅಭಿವೃದ್ಧಿಗೆ ಆದ್ಯತೆ ನೀಡಬೇಕಾಗಿದೆ.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**

ನಂ. 126, 1ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆ ಜೆಬಿ ಕಾವಲ್,
ರಾಜೀವ್‌ಗಾಂಧಿ ನಗರ, ನಂದಿನಿ ಲೇಔಟ್, ಬೆಂಗಳೂರು–560096
ದೂರವಾಣಿ ಸಂಖ್ಯೆ :
080–23564444 / 23464033 / 23464034
ಇ–ಮೇಲ್ : info@ksccsf.org
ksccsfltd@gmail.com, ವೆಬ್ : www.ksccsf.org

**ಸಂಪಾದಕ ಮಂಡಳಿ**

ಅಧ್ಯಕ್ಷರು / ಪ್ರಧಾನ ಸಂಪಾದಕರು :
**ಶ್ರೀ ವಿ. ರಾಜು**
ಕಾರ್ಯನಿರ್ವಾಹಕ ಸಂಪಾದಕರು:
**ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ**
ಸದಸ್ಯರು : **ಡಾ॥ ಸಂಜಯ ಪಿ. ಹೊಸಮಠ**
**ಶ್ರೀ ಎಂ.ಜೆ. ನರೇಂದ್ರಕುಮಾರ**
**ಶ್ರೀ ಕೆ. ಕೃಷ್ಣಮೂರ್ತಿ**
**ಶ್ರೀ ಡಿ.ಆರ್. ನಾಗೇಶಪ್ಪ**
**ಶ್ರೀ ಹೊನ್ನಯ್ಯ ವೀ ಹಿರೇಮಠ**
**ಶ್ರೀ ಚಿತ್ತರಂಜನ್ ಬೋಳಾರ್**
ಸಂಪಾದಕರು :
**ಪ್ರಜ್ವಲ್ ಕೆ.ಎನ್.**
ಮುಖ್ಯಕಾರ್ಯನಿರ್ವಹಣಾಧಿಕಾರಿ



## ಪತ್ತಿನ ಸಹಕಾರ ಮಹಾಮಂಡಳದ ಸಹಕಾರ ಸಪ್ತಾಹ ಆಚರಣೆ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದಲ್ಲಿ ನವಂಬರ್ – 14 ರಂದು ಪತ್ತಿನ ಮಹಾಮಂಡಳದ ಅಧ್ಯಕ್ಷರಾದ ವಿ.ರಾಜು ಅವರು ಸಹಕಾರ ಪಿತಾಮಹರಿಗೆ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಅಧಿಕಾರಿ/ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

**ಸುಭಾಷಿತ :** ಬೆಚ್ಚನೆ ಮನೆ ಇರಲು ವೆಚ್ಚಕೆ ಹೊನ್ನಿರಲು ಇಚ್ಛೆಯನರಿವ ಸತಿಯಿರಲು ಸ್ವರ್ಗಕ್ಕೆ ಕಿಚ್ಚು ಹಚ್ಚೆಂದ ಸರ್ವಜ್ಞ – ಸರ್ವಜ್ಞ

ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು "ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು" ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಒ.
ಐದು ವರ್ಷಗಳ ಚಂದಾ: ರೂ : 1770/-

**ಸೂಚನೆ :**
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

## ಬಾಗಲಕೋಟೆಯಲ್ಲಿ ಸಹಕಾರ ಸಪ್ತಾಹ : ಸಹಕಾರ ರತ್ನ ಪ್ರಶಸ್ತಿ ಪ್ರದಾನ

# ಕೃಷಿ ಸಾಲ ಮಿತಿ : ನಬಾರ್ಡ್ ನಿಲುವು ಬದಲಾಗಲಿ ಸಹಕಾರ ಡಿಪ್ಲೊಮಾ, ಪದವೀಧರರಿಗೆ ಉದ್ಯೋಗದಲ್ಲಿ ಮೀಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

**ಸಹಕಾರ ಸಂಘ-ಸಂಸ್ಥೆಗಳಲ್ಲಿ ವಿವಿಧ ವೃಂದಗಳ ಹುದ್ದೆಗಳನ್ನು ಭರ್ತಿ ಮಾಡುವಾಗ ಸಹಕಾರಿ ವಿಷಯದಲ್ಲಿ ಪದವಿ ಅಥವಾ ಡಿಪ್ಲೊಮಾ ಪಡೆದ ಅಭ್ಯರ್ಥಿಗಳಿಗೆ ಮೀಸಲಾತಿ ಸೇರಿದಂತೆ ಸಹಕಾರ ಕ್ಷೇತ್ರದಲ್ಲಿ ನಂಬಿಕೆ, ವಿಶ್ವಾಸ ಹೆಚ್ಚಿಸಿ, ನಬಾರ್ಡ್ ಬೆಳೆ ಸಾಲ ಪುನರ್ಧನ ಬಡ್ಡಿರಿಯಾತಿ ಮಿತಿ ಹೆಚ್ಚಿಸುವ ಕುರಿತು ಹೀಗೆ ವಿವಿಧ ವಿಷಯಗಳ ಮೇಲೆ 71ನೇ ಅಖಿಲ ಭಾರತ ಸಹಕಾರ ಸಪ್ತಾಹದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ಸಹಕಾರದ ಸಚಿವರು, ಶಾಸಕರುಗಳು ಹಾಗೂ ಸಹಕಾರ ಮುಖಂಡರುಗಳು ಸುದೀರ್ಘವಾಗಿ ಮಾತನಾಡಿದರು.**

**ಬಾಗಲಕೋಟೆ :** ಸಹಕಾರ ಪದವೀಧರರು ಮತ್ತು ಕೋ-ಆಪರೇಟೀವ್ ಮ್ಯಾನೇಜ್‌ಮೆಂಟ್ ಡಿಪ್ಲೊಮಾ ಕೋರ್ಸ್ ಮಾಡಿದವರಿಗೆ ಉದ್ಯೋಗದಲ್ಲಿ ಮೀಸಲಾತಿ ತರುವ ಬಗ್ಗೆ ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಭರವಸೆ ನೀಡಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್, ಸಹಕಾರ ಇಲಾಖೆ, ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಮತ್ತು ಜಿಲ್ಲೆಯ ಎಲ್ಲಾ ರೀತಿಯ ಸಹಕಾರ ಸಂಘಗಳ ಸಂಯುಕ್ತಾಶ್ರಯದಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹದ 4ನೇ ದಿನದ ಕಾರ್ಯಕ್ರಮ ಉದ್ಘಾಟಿಸಿ ನಂತರ ಸಹಕಾರ ರತ್ನ ಪ್ರಶಸ್ತಿ ವಿತರಿಸಿ ಮಾತನಾಡಿದ ಅವರು, ನಾನು ಯಾವತ್ತೂ ಸಹಕಾರಿ ಚಳವಳಿ ಮತ್ತು ಸಹಕಾರಿ ತತ್ವದ ಪರವಾಗಿ ಇರುವವನು. ಈ ಕಾರಣಕ್ಕೆ ಸಹಕಾರ ಸಂಘ-ಸಂಸ್ಥೆಗಳಲ್ಲಿ ನೇಮಕಾತಿಗಳಲ್ಲಿ ಕೋ-ಆಪರೇಟೀವ್ ಮ್ಯಾನೇಜ್‌ಮೆಂಟ್ ಡಿಪ್ಲೊಮಾ ಮತ್ತು ಸಹಕಾರ ವಿಷಯದಲ್ಲಿ ಪದವಿ ಪಡೆದವರಿಗೆ ಮೀಸಲಾತಿ ನೀಡುವ ಪರವಾಗಿದ್ದೀನಿ ಎಂದರು.

ರಾಜಕ್ಕೆ 'ನಬಾರ್ಡ್‌ನಿಂದ ರೈತರಿಗೆ ಬೆಳೆ ಸಾಲಕ್ಕಾಗಿ ಕಳೆದ ವರ್ಷ ರೂ.5,600 ಕೋಟಿ ಬಡ್ಡಿ ರಿಯಾತಿ ಮಿತಿಯಲ್ಲಿ ಸಾಲ ನೀಡಲಾಗಿತ್ತು. ಈ ಬಾರಿ ರೂ. 2,340 ಕೋಟಿ ನೀಡಿ ಕೇಂದ್ರ ಸರ್ಕಾರ ರೈತರಿಗೆ ಅನ್ಯಾಯ ಮಾಡಿದೆ. 'ಏಕಾಏಕಿ ಶೇ.58ರಷ್ಟು ಪ್ರಮಾಣ ಕಡಿತಗೊಳಿಸಲಾಗಿದೆ. 'ರೈತರಿಗೆ ಅನ್ಯಾಯ ಮಾಡದಂತೆ ಪ್ರಧಾನಿ ನರೇಂದ್ರ ಮೋದಿ ಮತ್ತು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಪತ್ರ ಬರೆದಿದ್ದೇನೆ. ಕೇಂದ್ರ ಸರ್ಕಾರಕ್ಕೆ ಪಕ್ಷಾತೀತವಾಗಿ ಎಲ್ಲರೂ ಪತ್ರ ಬರೆದು ರಾಜ್ಯದ ಪಾಲು ಕೇಳಬೇಕು' ಎಂದರು. ಕೂಡಲೇ ನಬಾರ್ಡ್ ಬೆಳೆ



ಸಾಲ ಪುನರ್ಧನ ಮಿತಿ ಹೆಚ್ಚಿಸಲಿ ಎಂದು ಅವರು ಆಗ್ರಹಿಸಿದರು.

ನಾನು ಪ್ರಥಮ ಬಾರಿಗೆ ಮುಖ್ಯಮಂತ್ರಿಯಾಗಿದ್ದಾಗ ಸಹಕಾರ ಸಂಘಗಳಲ್ಲಿ ಹಿಂದುಳಿದ ಸಮುದಾಯಗಳ ಯುವಕ/ ಯುವತಿಯರನ್ನು ಉಚಿತವಾಗಿ ಸದಸ್ಯರನ್ನಾಗಿ ಮಾಡಲು, ಸರ್ಕಾರದ ವತಿಯಿಂದ ಹಣ ಬಿಡುಗಡೆ ಮಾಡಿರುತ್ತೇನೆ, ಈಗಲೂ ಇದು ಮುಂದುವರೆಯಬೇಕು ಎಂದು ಕರೆ ನೀಡಿದರು. ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಹೆಚ್ಚು ಪ್ರೋತ್ಸಾಹ ನೀಡಬೇಕು ಮತ್ತು ಇವರಿಂದ ಗುಣಮಟ್ಟದ ಹಾಲನ್ನು ಖರೀದಿಸಬೇಕು. ಸಹಕಾರ ಸಂಘಗಳ ಹಾಲಿಗೆ ಮಾರುಕಟ್ಟೆ ವಿಸ್ತರಿಸಬೇಕು. ಹಾಲು ಉತ್ಪಾದಕರಿಗೆ ಅನುಕೂಲ ಆಗುವ ಉದ್ದೇಶದಿಂದಲೇ ನಮ್ಮ ಸರ್ಕಾರ ಕ್ಷೀರಭಾಗ್ಯ ಆರಂಭಿಸಿತು. ಒಂದು ಲೀಟರ್ ಹಾಲಿಗೆ ಹೈನುಗಾರರಿಗೆ 5 ರೂ. ಪ್ರೋತ್ಸಾಹ ಧನ ನೀಡುವುದನ್ನು ನಮ್ಮ ಅವಧಿಯಲ್ಲಿ

ಆರಂಭಿಸಲಾಯಿತು. ರೈತರ ಕೈಯಲ್ಲೇ ಹಾಲು ಉತ್ಪಾದಕರ ಸಂಘಗಳು ಇರಬೇಕು ಎನ್ನುವ ಉದ್ದೇಶದಿಂದ ಡೈರಿಗಳನ್ನು ರೈತರೇ ಮುನ್ನಡೆಸುವ ತೀರ್ಮಾನ ಮಾಡಿದೆವು. ಈ ಅಧಿಕಾರ ವಿಕೇಂದ್ರೀಕರಣದಿಂದ ಗ್ರಾಮೀಣ ಆರ್ಥಿಕತೆ ಗಟ್ಟಿಯಾಯಿತು. ಇದೇ ಮಹಾತ್ಮಗಾಂಧಿಯವರ ಗ್ರಾಮ ಸ್ವ-ರಾಜ್ಯದ ಆಶಯವೂ ಆಗಿದೆ ಎಂದರು.

ಯುವಕರು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಸಹಕಾರ ಕ್ಷೇತ್ರಕ್ಕೆ ಬರಬೇಕು, ಅದರಲ್ಲೂ ಹಿಂದುಳಿದವರು, ದಲಿತರು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಆರ್ಥಿಕವಾಗಿ ಹಿಂದುಳಿದ ಜನರು ತೊಡಗಿಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಲಹೆ ನೀಡಿದರು. ಸಹಕಾರ ರಂಗ ಬಲಿಷ್ಠವಾಗಬೇಕಾದರೆ, ಜ್ಯಾತ್ಯಾತೀತ, ಧರ್ಮತೀತ ಹಾಗೂ ಪಕ್ಷಾತೀತವಾಗಿ ಪ್ರತಿಯೊಬ್ಬರೂ ಒಗ್ಗಟ್ಟಿನಿಂದ ತೊಡಗಿಸಿಕೊಂಡಾಗ ಮಾತ್ರ ಸಾಧ್ಯ ಎಂದು ತಿಳಿಸಿದರು.

ಸಹಕಾರ ಕ್ಷೇತ್ರ ಆರ್ಥಿಕ, ಸಾಮಾಜಿಕವಾಗಿ ಅಭಿವೃದ್ಧಿ ಹೊಂದುವಲ್ಲಿ ಪರಸ್ಪರ ಸಹಕಾರ ಅವಶ್ಯವಾಗಿದ್ದು, ಎಲ್ಲ ರಂಗಗಳಿಗೂ ಈ ಸಹಕಾರ ರಂಗ ಮುನ್ನಡಿ ಬರೆದಿದೆ. ಹಳ್ಳಿಯಿಂದ-ದಿಲ್ಲಿಯವರೆಗೆ ಗ್ರಾಮ ಸ್ವರಾಜ್ಯ ಆಗಬೇಕೆಂಬ ಗಾಂಧೀಜಿಯವ ಕಲ್ಪನೆಯಂತೆ ಗ್ರಾಮೀಣ ಪ್ರದೇಶದ ಜನರು ಆರ್ಥಿಕವಾಗಿ ಪ್ರಬಲರಾದರೆ ಮಾತ್ರ ದೇಶ ಸಬಲವಾದಂತೆ ಎಂದು ಹೇಳಿದರು. ಸಹಕಾರ ಕ್ಷೇತ್ರದಲ್ಲಿ ವಿಶ್ವಾಸ, ಪ್ರಾಮಾಣಿಕತೆ ಮತ್ತು ನಂಬಿಕೆ ಬಹಳ ಮುಖ್ಯವಾಗಿದ್ದು, ಗ್ರಾಮೀಣ ಬದುಕಿನ ಆರ್ಥಿಕ ಬೆಳವಣಿಗೆ ಆಗಬೇಕಾದರೆ ಎಲ್ಲರೂ ಸಕ್ರಿಯರಾಗಿ ತೊಡಗಿಸಿಕೊಳ್ಳಬೇಕು ಎಂದರು. ಸಕ್ಕರೆ ಮತ್ತು ಜವಳಿ ಸಚಿವರಾದ ಶಿವಾನಂದ ಎಸ್.ಪಾಟೀಲ ರವರು ಮಾತನಾಡಿ, ವಿಜಯಪುರ-ಬಾಗಲಕೋಟೆ ಜಿಲ್ಲೆಗಳ ಡಿಸಿಸಿ ಬ್ಯಾಂಕುಗಳು ವಿಭಜನೆಯಾಗದಿದ್ದರೆ. ಇಂದು ಸಹಕಾರ ಕ್ಷೇತ್ರದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನದಲ್ಲಿ ಗುರುತಿಸಿಕೊಳ್ಳುತ್ತಿತ್ತು. ಈಗಲೂ ಎರಡು ಡಿಸಿಸಿ ಬ್ಯಾಂಕುಗಳು ಪ್ರತ್ಯೇಕವಾಗಿ ಉತ್ತಮ ಕೆಲಸ ಮಾಡುತ್ತಿವೆ ಎಂದರು.

ಅಬಕಾರಿ ಮತ್ತು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವರಾದ ಆರ್.ಬಿ. ತಿಮ್ಮಾಪುರ ಅವರು ಮಾತನಾಡಿ ಯಾವುದೇ ಸಹಕಾರಿ ಸಂಸ್ಥೆ ಕಷ್ಟದಲ್ಲಿದ್ದಾಗ ಅದನ್ನು ರಕ್ಷಿಸಿ, ಪೋಷಿಸುವ ಕಾರ್ಯ ಸರ್ಕಾರದ್ದಾಗಿದೆ. ಅದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಡಿದ್ದಾರೆ. ಜಿಲ್ಲೆಯ ಸಹಕಾರಿ ಸಕ್ಕರೆ ಕಾರ್ಖಾನೆ ಇತ್ತೀಚೆಗೆ ಸ್ಥಗಿತವಾಗುವ ಸಂಭವವಿತ್ತು. ಆ ಸಮಯದಲ್ಲಿ ರೂ. 40 ಕೋಟಿ ನೆರವು ನೀಡಿ ಕಾರ್ಖಾನೆಯ ಪುನರ್ ಆರಂಭಕ್ಕೆ ಅವಕಾಶ ಮಾಡಿಕೊಟ್ಟಿದ್ದಾರೆ ಎಂದರು.

ಸಹಕಾರ ಸಚಿವರಾದ ಕೆ.ಎನ್ ರಾಜಣ್ಣ ರವರು ಮಾತನಾಡಿ, ಬಾಗಲಕೋಟೆ-ವಿಜಯಪುರ ಜಿಲ್ಲೆಗಳ ಕೇಂದ್ರ ಸಹಕಾರಿ ಬ್ಯಾಂಕ್ ಮುಂಚೂಣಿಯಲ್ಲಿವೆ. ಸಹಕಾರ ಕ್ಷೇತ್ರದ ಬೆಳವಣಿಗೆಗೆ ಮುಖ್ಯಮಂತ್ರಿ ರವರು ಅಗತ್ಯ ಆರ್ಥಿಕ ನೆರವು ನೀಡಿದ್ದಾರೆ. ಜಾತ್ಯಾತೀತವಾಗಿ ಹಾಗೂ ಪಕ್ಷಾತೀತವಾಗಿ ಸಹಕಾರ ಆಂದೋಲನವನ್ನು ಜನಾಂದೋಲನ ವಾಗಿಸಬೇಕಿದೆ ಎಂದರು. ಕೃಷಿಯಲ್ಲಿ ಹಾಕಿದ ಬಂಡವಾಳ ವಾಪಸ್ ಬರುವುದು ಕಡಿಮೆ, ರೈತರಿಗೆ ಆರ್ಥಿಕ ಶಕ್ತಿ ಬರುವವರೆಗೆ ಅವರಿಗೆ ಸಹಕಾರದ ಬೆಂಬಲದ ಅವಶ್ಯಕತೆ ಇದೆ. ಸಹಕಾರಿ ಸಂಸ್ಥೆಗಳ ಮೂಲಕ ರೈತರಿಗೆ ಅನಾನುಕೂಲವಾಗುವುದರ ವಿರುದ್ಧ ನಾವೆಲ್ಲ ಗಟ್ಟಿಯಾಗಿ ಧ್ವನಿ ಎತ್ತಬೇಕು ಎಂದು ಸಹಕಾರ ಸಚಿವರು ಹೇಳಿದರು.

ಶಾಸಕರು ಮತ್ತು ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ ದೇವೇಗೌಡ ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ವಾಣಿಜ್ಯ ಬ್ಯಾಂಕುಗಳು ನೀಡದ ಸಾಲವನ್ನು ಸಹಕಾರಿ ಸಂಸ್ಥೆಗಳು ನೀಡುತ್ತಿವೆ. ಅವುಗಳಿಂದ ಸಾಲ ಪಡೆದವರೇ ಇಂದು ದೊಡ್ಡ ಉದ್ಯಮದಾರರಾಗಿ ಬೆಳೆದಿದ್ದಾರೆ. ಕ್ಷೇತ್ರ ಬೆಳೆಸಲು ಸರಕಾರದ ಬೆಂಬಲ ಬೇಕು, ಸಂಘಗಳನ್ನು ಉಳಿಸಲು ಮುಖ್ಯಮಂತ್ರಿ ಅವರು ಆರ್ಥಿಕ ನೆರವು ನೀಡಬೇಕು. ನಬಾರ್ಡ್ ಸಾಲದ ಪುನರ್ಧನ ಮಿತಿ ಪ್ರಮಾಣ ಕಡಿಮೆಯಾಗಿದ್ದು, ಕೇಂದ್ರ ಸರಕಾರಕ್ಕೆ ಪತ್ರ ಬರೆದು ನಿರ್ದೇಶನ ನೀಡಿ ಹೆಚ್ಚಿನ ಸಾಲ ಒದಗಿಸಬೇಕು" ಇದರಿಂದ ರೈತರಿಗೆ ಹೆಚ್ಚು ಸಾಲ ನೀಡಲು ಸಹಕಾರಿಯಾಗುತ್ತದೆ ಎಂದರು.

ಮಾಜಿ ಶಾಸಕರಾದ ಎಸ್.ಜಿ. ನಂಜಯ್ಯನಮಠ ರವರು ಸಹಕಾರ ಕ್ಷೇತ್ರದ ಪ್ರಸ್ತುತ ಸ್ಥಿತಿಗತಿಯ ಬಗ್ಗೆ ಸಹ ವಿವರವಾಗಿ ವಿವರಿಸಿದರು.


ವೇದಿಕೆಯ ಮೇಲೆ ಶಾಸಕರು ಹಾಗೂ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರಿ ಅಧ್ಯಕ್ಷರು ಎಚ್.ವಾಯ್.ಮೇಟಿ, ನವದೆಹಲಿ ರಾಜ್ಯ ವಿಶೇಷ ಪ್ರತಿನಿಧಿ ಪ್ರಕಾಶ ಹುಕ್ಕೇರಿ, ಶಾಸಕ ಜೆ.ಟಿ.ಪಾಟೀಲ, ಶಾಸಕರಾದ ವಿಜಯಾನಂದ ಕಾಶಪ್ಪನವರ, ಶಾಸಕರಾದ ಭೀಮಸೇನ, ಶಾಸಕರಾದ ಸಿದ್ದು ಸವದಿ, ಶಾಸಕರಾದ ಜಗದೀಶ ಎಸ್ ಗುಡಗುಂಟಿ, ನಗರ ಸಭೆ ಅಧ್ಯಕ್ಷರಾದ ಸವಿತಾ ಲೆಂಕಣ್ಣವರ, ಶಾಸಕರಾದ ಅಪ್ಪಾಜಿ. ಸಿ. ಎಸ್ ನಾಡಗೌಡ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಜಯ್‌ಕುಮಾರ ಸರನಾಯಕ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರುಗಳಾದ ಶೇಖರಗೌಡ ಮಾಲಿಪಾಟೀಲ, ಈರಣ್ಣ ಪಟ್ಟಣಶೆಟ್ಟಿ, ಬಸವರಾಜ ಅರಬಗೊಂಡ, ಜಿ.ಪಿ ಪಾಟೀಲ, ಬಾಪೂಗೌಡ ಪಾಟೀಲ, ಶಿವಪ್ರಸಾದ್, ವಿಜಯಪುರ-ಬಾಗಲಕೋಟೆ ಜಿಲ್ಲಾ ಸಹಕಾರ ಬ್ಯಾಂಕ್ ಅಧ್ಯಕ್ಷರಾದ ಐ.ಎಸ್ ಕರಿಗೌಡ್ರ, ರಾಜ್ಯ ಸಹಕಾರ ತೋಟಗಾರಿಕಾ ಮಹಾಮಂಡಳದ ಅಧ್ಯಕ್ಷರಾದ ಡಾ.ಬಿ.ಡಿ ಭೂಕಾಂತ, ರಾಜ್ಯ ವಿಮಾ ಸಹಕಾರ ಸಂಘದ ಅಧ್ಯಕ್ಷರಾದ ಶಿವನಗೌಡ ಬಿರಾದಾರ, ರಾಜ್ಯ ಉಣ್ಣೆ ಹಾಗೂ ಕೈಮಗ್ಗ ನೇಕಾರರ ಮಹಾಮಂಡಳದ ಅಧ್ಯಕ್ಷರಾದ ಕೃಷ್ಣ ಅಣಗೋಳಕರ, ಬಾಗಲಕೋಟೆ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾದ ದ್ಯಾಮಣ್ಣ ಗಾಳಿ, ವಿಜಯಪುರ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾದ ಎಂ.ಎಸ್ ಪಾಟೀಲ ಅವರು ಉಪಸ್ಥಿತರಿದ್ದರು.

ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮೊಹಮ್ಮದ್ ಮೋಹಿಸಿನ್, ಸಹಕಾರ ಇಲಾಖೆ ಕಾರ್ಯದರ್ಶಿ ಡಾ. ಎಂ.ಎನ್.

ಅಜಯ ನಾಗಭೂಷಣ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್.ನವೀನ್, ರಾಜ್ಯ ಅಪೆಕ್ಸ್ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕರಾದ ಸಿ.ಎನ್ ದೇವರಾಜ್, ಬಾಗಲಕೋಟೆ ಡಿಸಿಸಿ ಬ್ಯಾಂಕ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಸಿದ್ದನಗೌಡ ಎನ್. ನೀಲಪ್ಪನವರ್, ಸಹಕಾರ ಮಹಾಮಂಡಳದ ಕಾರ್ಯದರ್ಶಿ ಲಕ್ಷ್ಮೀಪತಯ್ಯ, ಬೆಳಗಾವಿ ಪ್ರಾಂತ್ಯ ಜಂಟಿ ನಿಬಂಧಕರಾದ ಡಾ. ಎಸ್. ಸುರೇಶಗೌಡ, ಜಂಟಿ ನಿಬಂಧಕರಾದ ಕೆ.ವೆಂಕಟೇಶ್, ಜಂಟಿ ನಿಬಂಧಕರಾದ ವ್ಹಿ. ಮಹೇಶ್ವರಪ್ಪ, ವಿಜಯಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಎಸ್.ಖ. ಬಿರಾದಾರ, ಬಾಗಲಕೋಟೆ ಜಿಲ್ಲಾ ಉಪನಿಬಂಧಕರಾದ ದಾನಯ್ಯ ಹಿರೇಮಠ, ವಿಜಯಪುರ ಜಿಲ್ಲಾ ಉಪನಿಬಂಧಕರಾದ ಕೆ.ಎಸ್ ಭಾಗ್ಯಶ್ರೀ, ವಿಜಯಪುರ-ಬಾಗಲಕೋಟೆ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಶಿವಶಂಕರ ಸ್ವಾಮಿ, ಕಾರ್ಯಕ್ರಮ ಸಮನ್ವಯಾಧಿಕಾರಿ ಎಂ.ಮಲ್ಲರಾಜ್, ಯೂನಿಯನ್ ಸಿಇಒ ಅನ್ನಪೂರ್ಣ ಹೇಮವಾಡಗಿ ಸೇರಿದಂತೆ ಸಹಕಾರಿ ಮುಖಂಡರು ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸಹಕಾರ ಸಪ್ತಾಹದ ರಾಜ್ಯಮಟ್ಟದ ಸಮಾರಂಭದಲ್ಲಿ ಸಹಕಾರ ಕ್ಷೇತ್ರದ ಸಾಧಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಸಹಕಾರ ರತ್ನ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು.

**ಜಿಲ್ಲೆಯ 6 ಸಹಕಾರಿ ಸಂಘಗಳಿಗೆ ಗೌರವ :** ರಾಜ್ಯ ಮಟ್ಟದ ಸಹಕಾರಿ ಸಪ್ತಾಹದಲ್ಲಿ ಜಿಲ್ಲೆಯ ಆರು ಸಹಕಾರ ಸಂಘಗಳನ್ನು ಅತ್ಯುತ್ತಮ ಸಹಕಾರಿ ಸಂಘಗಳೆಂದು ಗೌರವಿಸಿ ಸನ್ಮಾನಿಸಲಾಯಿತು. ರಾಷ್ಟ್ರಮಟ್ಟದ ಪ್ರಶಸ್ತಿ ಪಡೆದ ಜಮಖಂಡಿ ತಾಲೂಕಿನ ಸಾವಳಗಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಕಮತಗಿಯ ಚಾಮುಂಡೇಶ್ವರಿ ನೇಕಾರರ ಸಹಕಾರ ಸಂಘ, ಬಾದಾಮಿಯ ವೀರಪುಲಕೇಶಿ ಪಟ್ಟಣ ಸಹಕಾರ ಸಂಘ, ಬಾಗಲಕೋಟೆಯ ಉರ್ದು ಶಿಕ್ಷಕರ ಪತ್ತಿನ ಸಹಕಾರ ಸಂಘ, ಜಮಖಂಡಿ ತಾಲೂಕಿನ ಆಲಗೂರ ಹಾಲು ಉತ್ಪಾದಕರ ಸಹಕಾರ ಸಂಘ, ಪ್ರಭುಲಿಂಗೇಶ್ವರ ಸೌಹಾರ್ದ ಸಹಕಾರ ಸಂಘಗಳು ಈ ಗೌರವ ಪಡೆದವು.










## ಬೆಂಗಳೂರಿನಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಉದ್ಘಾಟನೆ



# ಸಹಕಾರ ವಲಯವನ್ನು ಬಲಪಡಿಸಲು ಸರ್ಕಾರ ಬದ್ಧ
# ಸಮಾಜದ ಎಲ್ಲ ವರ್ಗಗಳಿಗೂ ಸಹಕಾರ ಕ್ಷೇತ್ರದ ಲಾಭ ತಲುಪಲಿ
# ಸಹಕಾರಿಗಳು ದಕ್ಷತೆ, ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸಲಿ : ಕೆ.ಎನ್. ರಾಜಣ್ಣ

**ಬೆಂಗಳೂರು** : ಸಹಕಾರಿಗಳು ಪಕ್ಷಾತೀತರಾಗಿ, ಜ್ಯಾತ್ಯತೀತರಾಗಿ, ನುಡಿದಂತೆ ನಡೆಯುವ ಗುಣ ಹೊಂದಬೇಕು. ನಮ್ಮ ರಾಜ್ಯದ ಸಹಕಾರಿ ಆಂದೋಲನ ಇಂದು ಬೃಹದಾಕಾರವಾಗಿ ಅಭಿವೃದ್ಧಿ ಹೊಂದಿದ್ದು, ಇದರ ಪರಿಣಾಮಕಾರಿ ಬೆಳವಣಿಗೆಗಾಗಿ ಸಹಕಾರಿಗಳು ಪ್ರಾಮಾಣಿಕವಾಗಿ, ದಕ್ಷತೆಯಿಂದ ಕೆಲಸ ನಿರ್ವಹಿಸುವಂತೆ ಸಹಕಾರ ಸಚಿವರಾದ ಕೆ.ಎನ್. ರಾಜಣ್ಣನವರು ಸಹಕಾರಿಗಳಿಗೆ ಮಾರ್ಗದರ್ಶನ ಮಾಡಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ಸಹಕಾರ ಹಾಲು ಮಹಾಮಂಡಳ ಹಾಗೂ ಕರ್ನಾಟಕ ರಾಜ್ಯ ವಸತಿ ಸಹಕಾರ ಮಹಾಮಂಡಳ ಮತ್ತು ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಹಕಾರ ಒಕ್ಕೂಟಗಳು ಸೇರಿದಂತೆ ವಿವಿಧ ರೀತಿಯ ಸಹಕಾರ ಸಂಘಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ 71 ಅಖಿಲ ಭಾರತ ಸಹಕಾರ ಸಪ್ತಾಹದ ಉದ್ಘಾಟನೆ ಹಾಗೂ ಮೊದಲ ದಿನ ವಿಷಯದ "ಸಹಕಾರ ಸಚಿವಾಲಯದ ನೂತನ ಪ್ರಯತ್ನಗಳ ಮೂಲಕ ಸಹಕಾರ ಚಳವಳಿಯನ್ನು ಬಲಪಡಿಸುವ" ದಿನದ ಉದ್ಘಾಟನಾ ಸಮಾರಂಭದಲ್ಲಿ ಸಹಕಾರ ವಾರಪತ್ರಿಕೆಯ ವಿಶೇಷ ಸಂಚಿಕೆ ಬಿಡುಗಡೆ ಮಾಡಿ ಸಚಿವರು ಮಾತನಾಡಿದರು.

ಮುಂದುವರೆದು ಮಾತನಾಡಿದ ಅವರು, ನಮ್ಮ ರಾಜ್ಯದ ಸಹಕಾರ ಚಳವಳಿಗೆ ಶಿದ್ದನಗೌಡ ಸಂಣರಾಮನಗೌಡ ಪಾಟೀಲರು ಸೇರಿದಂತೆ ಹಲವಾರು ಮಹನೀಯರು ಭದ್ರ ಬುನಾದಿ ಹಾಕಿದ್ದಾರೆ. ಅವರುಗಳ ಮಾರ್ಗದರ್ಶನದಲ್ಲಿ ಸಹಕಾರ ಚಳವಳಿ ಈಗಾಗಲೇ ಸದೃಢವಾಗಿ ಬೆಳವಣಿಗೆಯಾಗಿದ್ದು, ಕೃಷಿ ಪತ್ತು, ಕೃಷಿಯೇತರ ಪತ್ತು, ಹೈನುಗಾರಿಕೆ, ಪಟ್ಟಣ ಸಹಕಾರ ಬ್ಯಾಂಕಿಂಗ್ ವಲಯ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿವೆ. ಸಹಕಾರ ಕ್ಷೇತ್ರದ ಕುರಿತು ಸಾರ್ವಜನಿಕರಲ್ಲಿ ಇನ್ನೂ ಹೆಚ್ಚಿನ ಜಾಗೃತಿ ಉಂಟಾಗಬೇಕು. ಸರ್ಕಾರ ಹಾಗೂ ಸಹಕಾರ ವಲಯದ ಭಿನ್ನತೆ ಕುರಿತು ಗ್ರಾಮೀಣ ಜನರಿಗೆ ಪರಿಚಯವಾಗಬೇಕು. ಇದೊಂದು ಸಹಕಾರಿಗಳ ಆಂದೋಲನವಾಗಿದ್ದು, "ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು" ಎಂಬ ಆಶಯ ತತ್ವದೊಂದಿಗೆ ತೊಡಗಿಸಿಕೊಂಡಿದೆ. ಎಲ್ಲಾ ವರ್ಗದ ಜನರು ಈ ಆಂದೋಲನದಲ್ಲಿ ಭಾಗಿಯಾಗಬೇಕು ಎಂದರು.

ಸಹಕಾರ ವಲಯದ ಸಮಗ್ರ ಬೆಳವಣಿಗೆಯ ದೃಷ್ಟಿಯಿಂದ ರಾಜ್ಯ ಸರ್ಕಾರ ಅದಕ್ಕೆ ಪೂರಕವಾದ ಕಾನೂನು ತಿದ್ದುಪಡಿಗಳನ್ನು ತರಲಿದೆ. ಹಾಲು ಉತ್ಪಾದಕ ರೈತರಿಗೆ ಹಾಲು ಉತ್ಪಾದನೆಗೆ ಉತ್ತೇಜನ ನೀಡಲು ಎನ್.ಡಿ.ಡಿ.ಬಿ ಯ ಸಾಫ್ಟ್‌ವೇರ್ ಅಳವಡಿಕೆಗೆ ಹಾಲು ಒಕ್ಕೂಟಗಳಿಗೆ ಮಾರ್ಗದರ್ಶನ ನೀಡಲಾಗಿದೆ.

ಹಣ ದುರುಪಯೋಗ ಪ್ರಕರಣಗಳಾಗದಂತೆ ತಡೆಯಲು ಸಹಕಾರ ಸಂಘಗಳ ಆಡಳಿತ ಮಂಡಳಿ ಸದಸ್ಯರು ಆಡಳಿತದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಸಹಕಾರ ಸಂಸ್ಥೆಗಳನ್ನು ಕಟ್ಟುವುದು ಮುಖ್ಯವಲ್ಲ ಅದನ್ನು ವ್ಯವಸ್ಥಿತವಾದ ರೀತಿಯಲ್ಲಿ ಬೆಳೆಸುವುದು ಸಹಕಾರಿಗಳ ಜವಾಬ್ದಾರಿಯಾಗಿದೆ ಎಂದರು.

ಸಹಕಾರಿ ರಂಗ ಉದ್ಯೋಗ ಸೃಷ್ಟಿ, ಸ್ವಾವಲಂಬಿ ಜೀವನಕ್ಕೆ, ಉದ್ಯಮಶೀಲತೆ ಬೆಳೆಸುವಲ್ಲಿ ಸಹಕಾರಿಯಾಗಿದೆ. ಸಹಕಾರ ಕ್ಷೇತ್ರದೊಳಗೆ ಹೆಚ್ಚಿನ ಸಂಖ್ಯೆಯ ಯುವಕರನ್ನು ಕರೆತರಲು, ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಸಹಕಾರ ವಿಷಯವನ್ನು ಪಠ್ಯ ಪುಸ್ತಕದಲ್ಲಿ ಅಳವಡಿಸಲು ಹಾಗೂ ಸಹಕಾರ ವ್ಯವಸ್ಥೆಯ ಉದ್ಯೋಗಾವಕಾಶಗಳಲ್ಲಿ ಸಹಕಾರ ವಿಷಯದಲ್ಲಿ ಪದವಿ ಹಾಗೂ ಡಿಪ್ಲೊಮಾ ಸರ್ಟಿಫಿಕೇಟ್ ಹೊಂದಿದವರಿಗೆ ಮೀಸಲಾತಿ ತರಲು ಪ್ರಯತ್ನಿಸುತ್ತೇನೆ ಎಂದರು.

## ಚಿತ್ರದುರ್ಗದಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಕೃಷಿ ಸಾಲ ವಿತರಣೆಗೆ ನಬಾರ್ಡ್ ಹೆಚ್ಚಿನ ನೆರವು ನೀಡಲಿ

## ಬಡತನ ನಿವಾರಣೆಯಲ್ಲಿ ಸಹಕಾರದ ಪಾತ್ರ ಹಿರಿದು : ಸಚಿವ ಡಿ. ಸುಧಾಕರ್



**ಚಿತ್ರದುರ್ಗ:** ನಬಾರ್ಡ್‌ನಿಂದ ಬೆಳೆ ಸಾಲ ವಿತರಣೆಗೆ ರಾಜ್ಯಕ್ಕೆ ಬರುತ್ತಿದ್ದ ಆರ್ಥಿಕ ನೆರವಿನಲ್ಲಿ ಶೇ.58ರಷ್ಟು ಕಡಿತ ಮಾಡಲಾಗಿದೆ ಇದರಿಂದ ರೈತರಿಗೆ ಅನ್ಯಾಯವಾಗಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಡಿಸಿಸಿ ಬ್ಯಾಂಕಿನ ಅಧ್ಯಕ್ಷರಾದ ಡಿ.ಸುಧಾಕರ್ ರವರು ವಿಷಾದ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಕುಕ್ಕುಟ ಮಹಾಮಂಡಳ, ಕರ್ನಾಟಕ ರಾಜ್ಯ ನೂಲಿನ ಗಿರಣಿಗಳ ಮಹಾಮಂಡಳ, ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್, ಶಿವಮೊಗ್ಗ, ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟ, ಶಿವಮೊಗ್ಗ, ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್, ಚಿತ್ರದುರ್ಗ ಜಿಲ್ಲೆಯ ಎಲ್ಲಾ ರೀತಿಯ ಸಹಕಾರ ಸಂಸ್ಥೆಗಳು ಹಾಗೂ ಸಹಕಾರ ಇಲಾಖೆ ಇವರುಗಳ ಸಹಯೋಗದೊಂದಿಗೆ ದಿನಾಂಕ : 15-11-2024ರಂದು 71ನೇ ಅಖಿಲ ಭಾರತ ಸಹಕಾರ ಸಪ್ತಾಹದ ಸಮಾರಂಭದ "ಸಹಕಾರ ಸಂಸ್ಥೆಗಳಲ್ಲಿ ಅನ್ವೇಷಣೆ, ತಾಂತ್ರಿಕತೆ ಮತ್ತು ಉತ್ತಮ ಆಡಳಿತ" ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕಳೆದ ಸಾಲಿನಲ್ಲಿ ನಬಾರ್ಡ್ ರೂ. 5,800 ಕೋಟಿ ನೀಡಿದ ಪುನರ್ಧನದಲ್ಲಿ ಆರ್ಥಿಕ ಸಹಾಯದಲ್ಲಿ ಕೇವಲ ರೂ.2,300 ಕೋಟಿ ಮಾತ್ರ ನೀಡಿದೆ. ರೂ.3,500 ಕೋಟಿ ಬಿಡುಗಡೆ ಮಾಡಿಲ್ಲ ಎಂದರು. ಪಕ್ಷಾತೀತವಾಗಿ ನಬಾರ್ಡ್ ರಾಜ್ಯಗಳಿಗೆ ನೆರವಿನ ಹೆಚ್ಚಳಕ್ಕೆ ಒತ್ತಾಯಿಸಬೇಕಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಡಿಸಿಸಿ ಬ್ಯಾಂಕ್ 70300 ರೈತರಿಗೆ 700 ಕೋಟಿ ರೂ. ಕೃಷಿ, ಹಾಗೂ ಅಭಿವೃದ್ಧಿ ಸಾಲ ನೀಡಿದೆ. ಇನ್ನೂ ಹೆಚ್ಚಿನ ರೈತರು ಸಾಲಕ್ಕೆ ಬೇಡಿಕೆ ಇಟ್ಟಿದ್ದಾರೆ. ನಬಾರ್ಡ್ ನೆರವು ದೊರೆತರೆ ಇನ್ನೂ ಹೆಚ್ಚಿನ ರೈತರಿಗೆ ಆರ್ಥಿಕ ನೆರವು ನೀಡಬಹುದಾಗಿದೆ ಎಂದರು.

ವಿಶ್ವದಲ್ಲೇ ಭಾರತ ಅತಿ ಹೆಚ್ಚು ಸಹಕಾರಿ ಸಂಸ್ಥೆಗಳನ್ನು ಹೊಂದಿದ್ದು 8.50 ಲಕ್ಷ ಸಂಸ್ಥೆಗಳಲ್ಲಿ 31ಕೋಟಿ ಸದಸ್ಯರಿದ್ದಾರೆ. ಬಡತನ ನಿವಾರಣೆಯಲ್ಲಿ ಸಹಕಾರದ ಪಾತ್ರ ಹಿರಿದಾಗಿದೆ. ತಂತ್ರಜ್ಞಾನದ ಸಮರ್ಥ ಬಳಕೆಯೊಂದಿಗೆ ಸಹಕಾರ ಸಂಸ್ಥೆಗಳ ದಕ್ಷತೆ ಹೆಚ್ಚಿಸಬೇಕಾಗಿದೆ ಎಂದು ಸಚಿವರು ಹೇಳಿದರು.

ಶಾಸಕರು ಹಾಗೂ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ ಅವರು ಮಾತನಾಡಿ ಗ್ರಾಮೀಣ, ರೈತರ ಸಂಜೀವಿನಿಯಾಗಿರುವ ಸಹಕಾರಿ ಕ್ಷೇತ್ರ, ರಾಜಕಾರಣಕ್ಕೆ ನಾಯಕರನ್ನೂ ಕೊಟ್ಟಿದೆ. ಆದರೆ, ಈ ಕ್ಷೇತ್ರದಿಂದ ಬೆಳೆದವರು, ಸಹಕಾರಿ ಕ್ಷೇತ್ರದ ಅಭಿವೃದ್ಧಿ ಮರೆಯುತ್ತಿದ್ದಾರೆಂದು ಬೇಸರ ವ್ಯಕ್ತಪಡಿಸಿದರು. ಯುವಜನರು - ಮಹಿಳೆಯರು ಸಹಕಾರ ಕ್ಷೇತ್ರದಲ್ಲಿ ಪಾಲ್ಗೊಂಡು ಸ್ವಾವಲಂಬಿಗಳಾಗಿರುವುದರ ಜೊತೆಗೆ ಉದ್ಯಮಿಗಳಾಗಬೇಕು, ರೈತರಿಗೆ ಸಕಾಲದಲ್ಲಿ ಸಾಲ ಕೊಡಬೇಕಾದರೆ ಕ್ಷೇತ್ರ ಬಲಗೊಳ್ಳಬೇಕು. ಸರ್ಕಾರದ ಹಸ್ತಕ್ಷೇಪ ಇರಕೂಡದು, ಆದರೆ ಬೆಂಬಲವಿರಬೇಕು. ಸಹಕಾರಿಗಳು ಉಳಿತಾಯದ ಮನೋಭಾವನೆ ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಹಕಾರ ಕ್ಷೇತ್ರದಿಂದಲೇ ಎಲ್ಲವನ್ನೂ ಪಡೆದವರು ಆ ಕ್ಷೇತ್ರಕ್ಕೆ ಏನಾದರೂ ಕೊಡುಗೆ ನೀಡಬೇಕು ಎಂಬ ಬದ್ಧತೆ ಇಲ್ಲವಾಗಿದೆ. ವಾಸ್ತವವಾಗಿ ಸಹಕಾರ ಕ್ಷೇತ್ರದಲ್ಲಿ ರಾಜಕಾರಣ ಇರಬಾರದು ಆದರೆ,



ರೈತರಿಗೆ ಬಡವರಿಗೆ ಸಹಾಯ ಮಾಡುವ ಸಹಕಾರಿಗಳಿಗೆ ಸರ್ಕಾರಗಳು ಸಹಾಯ ಮಾಡಬೇಕು. ಸರ್ಕಾರಗಳೂ ಮಾಡದ ಕೆಲಸವನ್ನು ಸಹಕಾರ ಸಂಘಗಳು ಮಾಡುತ್ತಿವೆ. ಹೀಗಾಗಿ ಸಹಕಾರಿ ಕ್ಷೇತ್ರಕ್ಕೆ ಬೆಂಬಲವಾಗಿ ನಿಲ್ಲಬೇಕು ಎಂದು ಹೇಳಿದರು.

ಕಾರ್ಯಕ್ರಮದ ವಸ್ತು ಪ್ರದರ್ಶನವನ್ನು ಸಂಸದರಾದ ಗೋವಿಂದ ಎಂ.ಕಾರಜೋಳ ಅವರು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಸಹಕಾರಿ ಬ್ಯಾಂಕ್‌ಗಳು ಗ್ರಾಮೀಣ ಕ್ಷೇತ್ರಕ್ಕೂ ತಮ್ಮ ಸೇವೆಯನ್ನು ವಿಸ್ತರಿಸಿವೆ. ಶೂನ್ಯ ಬಡ್ಡಿ ದರದಲ್ಲಿ ರೈತರಿಗೆ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಸಹಕಾರ ಸಂಸ್ಥೆಗಳಿಗೆ ಹಲವು ಉದ್ದಿಮೆ ಸ್ಥಾಪಿಸಲು ನೆರವು ನೀಡುತ್ತಿದ್ದಾರೆ. ರಾಜ್ಯದ ಸಹಕಾರ ಸಂಸ್ಥೆಗಳಲ್ಲಿ ಶೇ.50 ರಷ್ಟು ಮಹಿಳೆಯರನ್ನು ಸದಸ್ಯರನ್ನಾಗಿಸಲು ಪ್ರಯತ್ನ ನಡೆಸಬೇಕು. ಯಾವುದೇ ಸಹಕಾರಿ ಸಂಸ್ಥೆಗಳು ಮುಚ್ಚುವಂತಾಗಬಾರದು. ಇವುಗಳಿಗೆ ರಾಜ್ಯ ಸರ್ಕಾರದಿಂದ ಅಗತ್ಯ ನೆರವು ನೀಡಿ ಪುನಶ್ಚೇತನಗೊಳಿಸಬೇಕು ಎಂದು ಸಂಸದ ಗೋವಿಂದ ಕಾರಜೋಳ ಹೇಳಿದರು.

ಜಿಲ್ಲೆಯ ಸಹಕಾರ ಕ್ಷೇತ್ರದಲ್ಲಿ ಅನುಪಮ ಸೇವೆ ಸಲ್ಲಿಸಿರುವ 6 ಹಿರಿಯ ಸಹಕಾರಿಗಳು ಹಾಗೂ 6 ಸಹಕಾರಿ ಸಂಘಗಳ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು.

ವಿಧಾನ ಪರಿಷತ್ ಸದಸ್ಯರುಗಳಾದ ಕೆ.ಎಸ್. ನವೀನ್, ಚಿದಾನಂದ ಎಂ.ಗೌಡ, ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳದ ಅಧ್ಯಕ್ಷರಾದ ವೆಂಕಟರಾವ್ ನಾಡಗೌಡ, ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರುಗಳಾದ ಗಂಗಣ್ಣ, ಆರ್. ರಾಮರೆಡ್ಡಿ, ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾದ ಹೆಚ್. ಎಂ.ದ್ಯಾಮಣ್ಣ ಕೋಗುಂಡೆ, ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ನಿರ್ದೇಶಕರಾದ ಎಸ್.ಆರ್. ಗಿರೀಶ್, ಶಿಮುಲ್ ಅಧ್ಯಕ್ಷರಾದ ವಿದ್ಯಾಧರ್, ಶಿಮುಲ್ ನಿರ್ದೇಶಕರುಗಳಾದ ಜಿ.ಪಿ. ರೇವಣಸಿದ್ದಪ್ಪ, ಜಿ.ಬಿ. ಶೇಖರಪ್ಪ, ಬಿ.ಸಿ. ಸಂಜೀವಮೂರ್ತಿ, ರವಿಕುಮಾರ್ ಬಿ.ಆರ್., ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷರಾದ ಹೆಚ್.ವಿ. ಪ್ರತಾಪ ಸಿಂಹ, ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕರುಗಳಾದ ಜಿಂಕಲು ಬಸವರಾಜ್, ಜಿ.ಈ. ಅಜ್ಜಪ್ಪ, ಹೆಚ್.ಎನ್. ತಿಪ್ಪೇಸ್ವಾಮಿ, ಕೆ.ಜಗ್ಗಣ್ಣ, ಕೆ.ಹೆಚ್. ಜಗನ್ನಾಥ್, ಡಿ.ಎಂ. ಮಹೇಶ್ವರಪ್ಪ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷರಾದ ಹೆಚ್.ಬಿ.ಮಂಜುನಾಥ್, ಡಿಸಿಸಿ ಬ್ಯಾಂಕ್ ನಿರ್ದೇಶಕರುಗಳಾದ ಸಿ.ವೀರಭದ್ರಬಾಬು, ರಘುರಾಮರೆಡ್ಡಿ, ವಿನೋದಸ್ವಾಮಿ ಪಿ., ಟಿ.ಮಹಾಂತೇಶ್, ಕೆ.ಅನಂತ್, ಓ.ಮಂಜುನಾಥ್, ಪ್ರಾದೇಶಿಕ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷರಾದ ಜಿ.ವಿ.ಉದಯಕುಮಾರ್, ಉಪಾಧ್ಯಕ್ಷರಾದ ಎನ್. ರಂಗಪ್ಪ, ಚಿತ್ರದುರ್ಗ ತಾಲ್ಲೂಕು ಟಿಎಪಿಸಿಎಂಎಸ್ ಅಧ್ಯಕ್ಷರಾದ ಹೆಚ್. ಎಂ.ಮಂಜುನಾಥಪ್ಪ, ಅಪರ ನಿಬಂಧಕರು ಹಾಗೂ ಕಾರ್ಯಕ್ರಮದ ಸಮನ್ವಯಾಧಿಕಾರಿಗಳಾದ ರವೀಂದ್ರ ಜಿ.ಎಂ., ಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕರಾದ ಇಲ್ಯಾಸ್ ಉಲ್ಲಾ ಷರೀಫ್, ಸಹಕಾರ ಮಹಾಮಂಡಳದ ಕಾರ್ಯದರ್ಶಿ ಲಕ್ಷ್ಮೀಪತಯ್ಯ, ಸಹಕಾರ ಸಂಘಗಳ ಉಪನಿಬಂಧಕರಾದ ದಿಲೀಪ್‌ಕುಮಾರ್ ಆರ್.ಎಸ್., ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರಾದ ರಂಗಸ್ವಾಮಿ, ಪ್ರಾದೇಶಿಕ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಡಾ॥ ಎಂ.ಜಯಕೃಷ್ಣ, ಸಹಾಯಕ ನಿಬಂಧಕರಾದ ಬಾಹುಬಲಿ ಹಂಜೆ, ಲೆಕ್ಕಪರಿಶೋಧನಾ ಇಲಾಖೆಯ ಸಹಾಯಕ ನಿರ್ದೇಶಕರುಗಳಾದ ಜಯಪ್ರಕಾಶ್ ಎನ್.ಪಿ. ಪಿ.ಅಂಜನಮೂರ್ತಿ, ಬಿ.ರೂಪ, ಶಿಮುಲ್ ಉಪವ್ಯವಸ್ಥಾಪಕರಾದ ಸಂಜಯ್ ಕೆ.ಪಿ, ಕಾರ್ಯಕ್ರಮದ ಸಮನ್ವಯಾಧಿಕಾರಿ ಮಲ್ಲಯ್ಯ ಶೆಟ್ಟಿ, ಜಿಲ್ಲಾ ಸಹಕಾರ ಯೂನಿಯನ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಜಯಶ್ರೀ ಪಿ. ಹುನಗುಂದ, ಜಿಲ್ಲಾ ಸಹಕಾರ ಶಿಕ್ಷಕ ನಾಗರಾಜ್ ಪಾಟೀಲ್ ಮತ್ತಿತರರು ಉಪಸ್ಥಿತರಿದ್ದರು.

# ಮಂಗಳೂರಿನಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಆಚರಣೆ

## ಸಹಕಾರ ಚಳವಳಿ ಜನಾಂದೋಲನವಾಗಲಿ

### ಗ್ರಾಮೀಣ ಜನರಿಗೆ ಸಹಕಾರ ಸಂಘಗಳು ನೆರವಾಗಲಿ : ಸಹಕಾರ ಸಚಿವ ಕೆ.ಎನ್. ರಾಜಣ್ಣ




**ಮಂಗಳೂರು:** ಸಹಕಾರ ಚಳವಳಿ ಜನರ ಆಂದೋಲನವಾಗಿ ಬೆಳೆಯಲಿ. ಸಹಕಾರ ಸಂಸ್ಥೆಗಳಲ್ಲಿ ಜಾತ್ಯಾತೀತ ಹಾಗೂ ಪಕ್ಷಾತೀತವಾಗಿ ಕಾರ್ಯನಿರ್ವಹಿಸುವ ಮೂಲಕ ಸಹಕಾರ ಸಂಸ್ಥೆಗಳ ಬೆಳವಣಿಗೆಗೆ ಸಹಕಾರಿಗಳೆಲ್ಲರೂ ಶ್ರಮವಹಿಸಿ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರು ತಿಳಿಸಿದರು.

ಅವರು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ, ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಮತ್ತು ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲಾ ಸಹಕಾರ ಯೂನಿಯನ್‌ಗಳು ಮತ್ತು ಜಿಲ್ಲೆಯ ವಿವಿಧ ಸಹಕಾರ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸಲಾದ 71ನೇ ಅಖಿಲ ಭಾರತ ಸಹಕಾರ ಸಪ್ತಾಹದ "ಉದ್ಯಮಶೀಲತೆ, ಉದ್ಯೋಗ ಮತ್ತು ಕೌಶಲ್ಯಾಭಿವೃದ್ಧಿಯನ್ನು ಉತ್ತೇಜಿಸುವಲ್ಲಿ ಸಹಕಾರ ಸಂಸ್ಥೆಗಳ ಪಾತ್ರ" ಎಂಬ ದಿನದ ವಿಷಯ ಕುರಿತ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಮುಂದುವರೆದು ಮಾತನಾಡಿದ ಅವರು, ಸಹಕಾರ ಸಂಸ್ಥೆಗಳು ಜನರ ಸಂಸ್ಥೆಗಳಾಗಿದ್ದು, ಈ ಸಂಸ್ಥೆಗಳಲ್ಲಿ ಸದಸ್ಯತ್ವ ಹೆಚ್ಚಾಗಬೇಕು. ಸದಸ್ಯರ ಬೇಡಿಕೆಗಳನ್ನು ಪೂರೈಸಿದಾಗ 120 ವರ್ಷಗಳ ಇತಿಹಾಸವಿರುವ ಸಹಕಾರಿ ಆಂದೋಲನಕ್ಕೆ ಕೀರ್ತಿ ಸಲ್ಲುತ್ತದೆ. ಸಹಕಾರ ಸಪ್ತಾಹದ ಪ್ರಮುಖ ಉದ್ದೇಶ ದೇಶದ ಪ್ರಥಮ ಪ್ರಧಾನಿ ಪಂಡಿತ್ ಜವಹರಲಾಲ್ ನೆಹರೂ ರವರು ಈ ಕ್ಷೇತ್ರಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸಿ ಅವರ ಹುಟ್ಟುಹಬ್ಬದಿಂದ ಸಪ್ತಾಹ ಆರಂಭವಾಗುತ್ತದೆ. ಈ ಸಂದರ್ಭದಲ್ಲಿ ಸಹಕಾರ ಕ್ಷೇತ್ರದ ಸಾಧಕ ಬಾಧಕಗಳ ಕುರಿತು ಚರ್ಚಿಸುವ ಮೂಲಕ ಅರ್ಥಪೂರ್ಣವಾದ ಆಚರಣೆಗೆ ಎಲ್ಲರೂ ಶ್ರಮಿಸೋಣ ಎಂದರು.

ವಸ್ತುಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ. ಖಾದರ್ ಫರೀದ್ ಅವರು ಮಾತನಾಡಿ, ದೇಶದ ಆರ್ಥಿಕ ಸ್ವಾವಲಂಬನೆಯಲ್ಲಿ ಗ್ರಾಮೀಣ ಜನರ ಸ್ವಾವಲಂಬಿ ಬದುಕಿನಲ್ಲಿ ಮಹಿಳೆಯರು ಹಾಗೂ ಯುವಜನರ ಅಭಿವೃದ್ಧಿಯಲ್ಲಿ ಸಹಕಾರ ರಂಗದ ಕೊಡುಗೆ ಅಪಾರವಾದುದು. ಈ ಸಂದರ್ಭದಲ್ಲಿ ಚಳವಳಿಯ ಬೆಳವಣಿಗೆಗೆ ಮತ್ತಷ್ಟು ಪರಿಣಾಮಕಾರಿ ಕಾರ್ಯಚಟುವಟಿಕೆಗಳನ್ನು ಸಹಕಾರಿಗಳು ಕೈಗೊಳ್ಳಿರಿ ಎಂದು ಮಾರ್ಗದರ್ಶನ ಮಾಡಿದರು. ಉತ್ತಮ ಸಹಕಾರ ಸಂಘಗಳಿಗೆ ಪ್ರಶಸ್ತಿ ಪ್ರದಾನ ಮಾಡಿದ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಅವರು ಮಾತನಾಡಿ, ವಾಣಿಜ್ಯ, ಕೃಷಿ, ಉದ್ಯಮ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆಗೆ ಸಹಕಾರಿ ರಂಗ ಕಾರಣವಾಗಿದೆ. ಈ ರಂಗದ ಮೂಲಕ ಸಾಮಾನ್ಯ ಜನರು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಸಾಧ್ಯವಾಗಿದ್ದು, ರಾಜ್ಯದಲ್ಲಿ ಕೆ.ಎಂ.ಎಫ್.ನ ನಂದಿನಿ ಉತ್ಪನ್ನಗಳು ಅಂತಾರಾಷ್ಟ್ರೀಯ ಮಟ್ಟಕ್ಕೆ ಪರಿಚಿತವಾಗಿದ್ದು, ಇದರ ಹಿಂದೆ ರಾಜ್ಯದ ಸರ್ಕಾರದ ಮಾರ್ಗದರ್ಶನ ಹಾಗೂ ಸಹಕಾರಿ ಮುಖಂಡರುಗಳ ಪರಿಶ್ರಮ ಇದೆ.

ಶಾಸಕರಾದ ಲಕ್ಷ್ಮಣ ಸವದಿ ಅವರು ಜಿಲ್ಲೆಯಲ್ಲಿ ಶತಮಾನೋತ್ಸವ ಪೂರೈಸಿದ ಸಹಕಾರ ಸಂಘಗಳಿಗೆ ಸನ್ಮಾನಿಸಿ, ಮಾತನಾಡುತ್ತಾ, ಉದ್ಯೋಗ ಸೃಷ್ಠಿ ಹಾಗೂ ಉದ್ಯಮ ಶೀಲತೆಯಲ್ಲಿ ಸಹಕಾರ ರಂಗದ ಕೊಡುಗೆ ಪ್ರಮುಖವಾಗಿದೆ. ಸಕ್ಕರೆ ಕಾರ್ಖಾನೆ ಮತ್ತು ಸಕ್ಕರೆ ಉತ್ಪಾದನೆಯಲ್ಲಿ ರಾಜ್ಯದ ಸಹಕಾರ ರಂಗದ ಕೊಡುಗೆ ಅಪಾರವಾದುದು. ವಿಶೇಷವಾಗಿ ವಿದ್ಯುತ್ ಸರಬರಾಜು ಮಾಡುವ ಸಹಕಾರ ಸಂಸ್ಥೆ ಬೆಳಗಾವಿಯ

ಹುಕ್ಕೇರಿಯಲ್ಲಿದ್ದು, ಇದೇ ರೀತಿ ಇನ್ನೂ ಹಲವಾರು ವಿವಿಧ ರೀತಿಯ ಸಹಕಾರ ಸಂಸ್ಥೆಗಳು ಉತ್ತಮ ಸೇವೆ ಸಲ್ಲಿಸುವ ಮೂಲಕ ಸಹಕಾರ ರಂಗದ ಕೀರ್ತಿಯನ್ನು ಹೆಚ್ಚಿಸಿವೆ ಎಂದು ಶ್ಲಾಘಿಸಿದರು.

ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ ಅವರು ಉತ್ತಮ ಸ್ವಸಹಾಯ ಸಂಘಗಳಿಗೆ ಗೌರವಿಸಿ ಮಾತನಾಡಿ, ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ರೈತರಿಗೆ ನೀಡುತ್ತಿರುವ ಸಾಲ ವ್ಯವಸ್ಥೆ ಮತ್ತಷ್ಟು ಹೆಚ್ಚಾಗಬೇಕಾದರೆ, ನಬಾರ್ಡ್‌ನಿಂದ ಸಹಕಾರಿ ಕ್ಷೇತ್ರಕ್ಕೆ ಹೆಚ್ಚಿನ ಬೆಳೆಸಾಲ ಪುನರ್ಧನ ಮೊತ್ತ ನೀಡುವ ಮೂಲಕ ಪ್ರೋತ್ಸಾಹ ದೊರೆಯಬೇಕು. ಹಾಗೆಯೇ ಸಹಕಾರಿ ಕ್ಷೇತ್ರದ ಪರಿಣಾಮಕಾರಿ ಬೆಳವಣಿಗೆಗೆ ಸಹಕಾರ ಸಪ್ತಾಹ ಉತ್ತಮ ವೇದಿಕೆಯಾಗಲಿ ಎಂದು ತಿಳಿಸಿದ ಅವರು ದಕ್ಷಿಣ ಕನ್ನಡ ಜಿಲ್ಲೆಯ ಸಹಕಾರ ಚಳವಳಿಯ ಬೆಳವಣಿಗೆಯಲ್ಲಿ ಡಾ. ರಾಜೇಂದ್ರಕುಮಾರ್ ಅವರ ನಾಯಕತ್ವ ಪ್ರಮುಖವಾದುದು. ಸಹಕಾರಿ ರಂಗಕ್ಕೆ ನಾಯಕರುಗಳನ್ನು ಸೃಷ್ಠಿಸುವ ಮಹಾನ್‌ಶಕ್ತಿ ಇದೆ. ಎಂ.ಎನ್. ರಾಜೇಂದ್ರಕುಮಾರ್ ಅವರ ನೇತೃತ್ವದಲ್ಲಿ ಜಿಲ್ಲೆಯ ಸಹಕಾರ ಚಳವಳಿ ಮತ್ತಷ್ಟು ಪ್ರಬಲವಾಗಿ ಬೆಳೆಯಲಿ ಎಂದು ಶುಭ ಕೋರಿದರು.


ಸಮಾರಂಭದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ಡಾ. ಎಂ.ಎನ್. ರಾಜೇಂದ್ರಕುಮಾರ್ ಅವರು ವಹಿಸಿದ್ದರು. ನಂತರ ಅವರು ಮಾತನಾಡುತ್ತಾ, ಸಹಕಾರ ಕ್ಷೇತ್ರ ಅಬಲವರ್ಗದವರ ಆಶಾಕಿರಣವಾಗಿದ್ದು, ಇದರ ಬಲಿಷ್ಠ ಬೆಳವಣಿಗೆಯಲ್ಲಿ ನಾವೆಲ್ಲರೂ ಶ್ರಮವಹಿಸಿ ಕೆಲಸ ನಿರ್ವಹಿಸೋಣ ಎಂದು ತಿಳಿಸಿದರು.

ಶಾಸಕ ಡಾ. ಭರತ್ ಶೆಟ್ಟಿ ವೈ., ಶಾಸಕರು ಹಾಗೂ ದ.ಕ. ಹಾಗೂ ಉಡುಪಿ ಜಿಲ್ಲಾ ಸಹಕಾರಿ ಮೀನು ಮಾರಾಟ ಮಹಾಮಂಡಳದ ಅಧ್ಯಕ್ಷರಾದ ಯಶ್‌ಪಾಲ್ ಎ. ಸುವರ್ಣ, ನಬಾರ್ಡ್ ಮುಖ್ಯ ಮಹಾಪ್ರಬಂಧಕ ಎಸ್.ಎಲ್.ವಿ. ಪ್ರಸಾದ್ ರಾವ್, ಮಂಗಳೂರು ಮಹಾನಗರ ಪಾಲಿಕೆಯ ಮೇಯರ್ ಮನೋಜ್ ಕುಮಾರ್, ಕೋಡಿಕಲ್ ಹಾಗೂ ದ.ಕ. ಸಹಕಾರಿ ಹಾಲು ಉತ್ಪಾದಕರ ಒಕ್ಕೂಟದ ಅಧ್ಯಕ್ಷ ಕೆ.ಪಿ. ಸುಚರಿತ ಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಅಪರ ನಿಬಂಧಕರಾದ ಕೆ.ಎಸ್. ನವೀನ್, ಮಾರಾಟ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಗುರುಸ್ವಾಮಿ, ಜಂಟಿ ನಿಬಂಧಕರಾದ ಪ್ರಸಾದ್ ರೆಡ್ಡಿ, ಉಪನಿಬಂಧಕರಾದ ಎಚ್. ಎನ್. ರಮೇಶ್, ಎಸ್‌ಸಿಡಿಸಿಸಿ ಬ್ಯಾಂಕಿನ ಉಪಾಧ್ಯಕ್ಷರಾದ ವಿನಯ ಕುಮಾರ್ ಸೂರಿಂಜೆ, ಉಭಯ ಜಿಲ್ಲೆಗಳ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷರುಗಳಾದ ಜಯಕರಶೆಟ್ಟಿ ಇಂದ್ರಾಳಿ, ಬೆಳ್ಳಿಪ್ಪಾಡಿ ಪ್ರಸಾದ್ ಕೌಶಲ್ ಶೆಟ್ಟಿ, ಬ್ಯಾಂಕಿನ ನಿರ್ದೇಶಕರುಗಳಾದ ಶಶಿಕುಮಾರ್ ರೈ ಬಿ., ಎಸ್.ಬಿ. ಜಯರಾಮ ರೈ, ಮೋನಪ್ಪ ಶೆಟ್ಟಿ ಎಕ್ಕಾರು, ಪಿ. ರಾಜೇಶ್ ರಾವ್, ಸದಾಶಿವ ಉಳ್ಳಾಲ್, ಎಸ್. ರಾಜು ಪೂಜಾರಿ, ಸ್ಕ್ಯಾಡ್ಸ್ ಅಧ್ಯಕ್ಷ ರವೀಂದ್ರ ಕಂಬಳಿ, ಉಪನಿಬಂಧಕರಾದ ಎಚ್.ಎನ್. ರಮೇಶ್, ಉಪನಿಬಂಧಕಿ ಲಾವಣ್ಯ ಕೆ.ಆರ್. ಹಾಗೂ ಬ್ಯಾಂಕಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ. ಗೋಪಾಲಕೃಷ್ಣಭಟ್, ಸಹಕಾರ ಮಹಾಮಂಡಳದ ನೋಡಲ್ ಅಧಿಕಾರಿ ಎಂ.ಎನ್. ಶಿವಕುಮಾರ್ ಅವರುಗಳು ಸೇರಿದಂತೆ ಸಹಕಾರಿ ಮುಖಂಡರು, ಅಧಿಕಾರಿಗಳು ಉಪಸ್ಥಿತರಿದ್ದರು. ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಬೆಳಪು ದೇವಿಪ್ರಸಾದ್ ಶೆಟ್ಟಿ ಸ್ವಾಗತಿಸಿದರು.



**ಆತ್ಮಶಕ್ತಿ ವಿವಿಧೋದ್ದೇಶ ಸಹಕಾರಿ ಸಂಘದ ಪ್ರಧಾನ ಕಚೇರಿ ಆತ್ಮಶಕ್ತಿ ಸೌಧದಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹದ ಪ್ರಯುಕ್ತ ಧ್ವಜಾರೋಹಣ ಕಾರ್ಯಕ್ರಮ ನೆರವೇರಿತು. ಆತ್ಮಶಕ್ತಿ ವಿವಿಧೋದ್ದೇಶ ಸಹಕಾರಿ ಸಂಘದ ಅಧ್ಯಕ್ಷರಾದ ಸಹಕಾರ ರತ್ನ ಶ್ರೀ ಚಿತ್ತರಂಜನ್ ಬೋಳಾರ್‌ರವರು ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಶ್ರೀ ನೇಮಿರಾಜ್ ಪಿ, ನಿರ್ದೇಶಕರಾದ ಶ್ರೀ ಗೋಪಾಲ್ ಎಮ್, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಸೌಮ್ಯ ವಿಜಯ್, ಸಲಹೆಗಾರರಾದ ಶ್ರೀ ಅಶೋಕ್ ಕುಮಾರ್ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.**




## ಬೀದರ್‌ನಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಆಚರಣೆ

# ದೇಶದ ಆರ್ಥಿಕತೆಗೆ ಸಹಕಾರ ವಲಯದ ಕೊಡುಗೆ ಅಪಾರ

## ಬೀದರ್ ಜಿಲ್ಲೆಯಲ್ಲಿ ಹೈನುಗಾರಿಕೆಗೆ ವಿಪುಲ ಅವಕಾಶ : ಅರಣ್ಯ ಸಚಿವ ಈಶ್ವರ ಖಂಡ್ರೆ

**ಬೀದರ್ :** ಭಾರತದ ಆರ್ಥಿಕ ಮತ್ತು ಸಾಮಾಜಿಕ ಪ್ರಗತಿಯಲ್ಲಿ ಸಹಕಾರ ಕ್ಷೇತ್ರದ ಕೊಡುಗೆ ಶ್ಲಾಘನೀಯವಾದುದು ಎಂದು ಅರಣ್ಯ ಸಚಿವರು ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಅವರು ಬೀದರ್ ಜಿಲ್ಲೆಯಲ್ಲಿ ದಿನಾಂಕ : 18.11.2024 ರಂದು ಕರ್ನಾಟಕ ರಾಜ್ಯ ಪತ್ತಿನ ಸಹಕಾರ ಸಂಘಗಳ ಮಹಾಮಂಡಳ, ಬೀದರ್ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ಕಲಬುರಗಿ-ಬೀದರ್, ಯಾದಗಿರಿ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ಹಾಗೂ ಜಿಲ್ಲೆಯ ವಿವಿಧ ರೀತಿಯ ಸಹಕಾರ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಸಪ್ತಾಹದ 5ನೇ ದಿನದ ಉದ್ಘಾಟನಾ ಸಮಾರಂಭವನ್ನು ನೆರವೇರಿಸಿ ಮಾತನಾಡಿದರು. ಸ್ವಾತಂತ್ರ್ಯ ಪೂರ್ವದಲ್ಲಿ ಆರಂಭವಾದ ಸಹಕಾರಿ ಆಂದೋಲನ ಇಂದು ಬೃಹದಾಕಾರವಾಗಿ ಬೆಳವಣಿಗೆ ಹೊಂದಿದ್ದು, ಕರ್ನಾಟಕ ರಾಜ್ಯವು ಸಹಕಾರಿ ಆಂದೋಲನದಲ್ಲಿ ದೇಶದಲ್ಲೇ 3ನೇ ಸ್ಥಾನದಲ್ಲಿರುವುದು ನಮ್ಮೆಲ್ಲರ ಹೆಗ್ಗಳಿಕೆಯಾಗಿದೆ. ಸಹಕಾರ ಕ್ಷೇತ್ರದ ಮೂಲಕ ಅಬಲವರ್ಗದವರಿಗೆ ಆರ್ಥಿಕ ಸ್ವಾವಲಂಬಿ ಬದುಕಿಗೆ ಹೈನುಗಾರಿಕೆ ವಲಯ, ಗೃಹ ನಿರ್ಮಾಣ, ಪ್ಯಾಕ್ಸ್‌ಗಳು, ಪಟ್ಟಣ ಸಹಕಾರ ಬ್ಯಾಂಕುಗಳು, ಪತ್ತಿನ ಸಹಕಾರ ಸಂಘಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ಮಹಿಳೆಯರಿಗೂ ಸಹ ಈ ಕ್ಷೇತ್ರ ಸ್ವಾವಲಂಬಿ ಬದುಕಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಬೀದರ್ ಜಿಲ್ಲೆಯಲ್ಲಿ ಹೈನುಗಾರಿಕೆ ಉದ್ಯಮವು ಉಪಕಸಬುಗಳಲ್ಲಿ ಒಂದಾಗಿ, ಉತ್ತಮ ಉದ್ಯಮವಾಗಿ ಬೆಳವಣಿಗೆ ಹೊಂದುತ್ತಿದೆ. ಹೆಚ್ಚಿನ ಪ್ರಮಾಣದ ಹಾಲು ಉತ್ಪಾದನೆಗೆ ಅಗತ್ಯವಾದ ಮೇವು, ನೀರು ಮತ್ತು ಉತ್ತಮ ವಾತಾವರಣವಿದ್ದು, ರೈತರು ಇದರ ಸದುಪಯೋಗ ಪಡೆಯಬೇಕೆಂದು ತಿಳಿಸಿದರು.

ಸಹಕಾರ ಸಂಸ್ಥೆಗಳು ಆರ್ಥಿಕ ಚಟುವಟಿಕೆಯ ಮೂಲಕ ವಿವಿಧ ಕ್ಷೇತ್ರಗಳಲ್ಲಿ ಮಹತ್ವದ ಸಾಧನೆ ಮಾಡಿವೆ. ವೈವಿಧ್ಯಮಯವಾದ ಅವಕಾಶಗಳ ಮೂಲಕ ಉದ್ಯಮಶೀಲತೆಗೆ ಸಹಕಾರ ಕ್ಷೇತ್ರ ಅವಕಾಶ ಕಲ್ಪಿಸುತ್ತಿದೆ. ಸರ್ಕಾರದ ಜನಪರ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಲ್ಲಿ ಸಹಕಾರ ಸಂಸ್ಥೆಗಳ ಪಾತ್ರ ಪ್ರಮುಖವಾಗಿದ್ದು, ಉತ್ತಮ ಸೇವೆ ನೀಡುವಲ್ಲಿ ಯಶಸ್ವಿಯಾಗಿವೆ ಎಂದರು.

ಈ ಸಂದರ್ಭದಲ್ಲಿ ಬಿ.ಎಸ್.ಎಸ್.ಕೆ. ಕಾರ್ಖಾನೆಯ ಪುನರಾರಂಭಕ್ಕೆ ರೈತರು ಮತ್ತು ಕಾರ್ಮಿಕರು ಸಲ್ಲಿಸಿದ ಮನವಿಯನ್ನು ಪರಿಶೀಲಿಸಿ ಕಾರ್ಖಾನೆಯ ಪುನರಾರಂಭಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ ಅವರು ಭರವಸೆ ನೀಡಿದರು.

ಪೌರಾಡಳಿತ ಸಚಿವರಾದ ರಹೀಂ ಖಾನ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಹಕಾರ ಕ್ಷೇತ್ರ ನಾಡಿನ ಜನರ ಆರ್ಥಿಕ ಸ್ವಾವಲಂಬನೆಯಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ. ರೈತರ ಕೃಷಿ ಚಟುವಟಿಕೆಗಳಿಗೆ ಹಾಗೂ ಉಪಕಸುಬುಗಳನ್ನು ಕೈಗೊಳ್ಳಲು ಅವರಿಗೆ ಉತ್ತೇಜನ ನೀಡುತ್ತಿದೆ ಹಾಗೂ ಸಕ್ಕರೆ ಕಾರ್ಖಾನೆಗಳು, ಹತ್ತಿ ಗಿರಣಿಗಳು ಉದ್ಯೋಗ ಸೃಷ್ಟಿಗೆ ನೆರವಾಗುತ್ತಿದ್ದು, ಒಟ್ಟಾರೆ ಈ ಕ್ಷೇತ್ರದ ಪರಿಣಾಮಕಾರಿ ಬೆಳವಣಿಗೆಗೆ ಎಲ್ಲರೂ ಶ್ರಮಿಸೋಣ ಎಂದರು.

ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ರೈತರ ಸ್ವಾವಲಂಬಿ



ಬದುಕಿಗೆ ಪೂರಕವಾಗಿ ಆರಂಭವಾದ ಸಹಕಾರ ಕ್ಷೇತ್ರ ಇಂದು ಬೃಹದಾಕಾರವಾಗಿ ಬೆಳವಣಿಗೆ ಹೊಂದಿದೆ. ಈ ಕ್ಷೇತ್ರದ ಬೆಳವಣಿಗೆಯಲ್ಲಿ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳುವಂತೆ ಸಲಹೆ ಮಾಡಿದರು. ಕಾರ್ಯಕ್ರಮದಲ್ಲಿ ಸಹಕಾರ ಸಂಘಗಳ ಅಪರ ನಿಬಂಧಕರು ಹಾಗೂ ಮಹಾಮಂಡಳದ ಕಾರ್ಯದರ್ಶಿ ಲಕ್ಷ್ಮೀಪತಯ್ಯ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಸಪ್ತಾಹ ಆಚರಣೆಯ ಮಹತ್ವದ ಬಗ್ಗೆ ಮಾತನಾಡುತ್ತಾ ಜವಹರಲಾಲ್ ನೆಹರೂರವರ ಹುಟ್ಟುಹಬ್ಬದಂದು ಪ್ರಯುಕ್ತ ಸಹಕಾರ ಸಪ್ತಾಹ ಆಚರಣೆ ಆರಂಭ ಮಾಡಲಾಗುತ್ತದೆ. ಇದರ ಉದ್ದೇಶ ನೆಹರೂರವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಪಂಚವಾರ್ಷಿಕ ಯೋಜನೆಗಳಲ್ಲಿ ಸಹಕಾರ ಕ್ಷೇತ್ರಕ್ಕೆ ಹೆಚ್ಚಿನ ಮಹತ್ವವನ್ನು ನೀಡಿದರು. ಅದರಿಂದಾಗಿ ಪ್ರತಿವರ್ಷ ಅವರ ಹುಟ್ಟುಹಬ್ಬವಾದ ನವೆಂಬರ್ 14 ರಂದು ಸಪ್ತಾಹ ಆರಂಭವಾಗಿ 20 ರಂದು ಕೊನೆಗೊಳ್ಳುತ್ತದೆ ಎಂದರು.

ಮೊದಲು ಸ್ಥಳೀಯವಾಗಿ ಆಚರಣೆಯಾಗುತ್ತಿದ್ದ ಸಹಕಾರ ಸಪ್ತಾಹವನ್ನು ಜಿ.ಟಿ. ದೇವೇಗೌಡ ಅವರು ಮಹಾಮಂಡಳದ ಅಧ್ಯಕ್ಷರಾದ ಸಂದರ್ಭದಲ್ಲಿ 1996 ರಲ್ಲಿ ರಾಮನಗರ ಜಿಲ್ಲೆಯ ಅಂಕೇನಹಳ್ಳಿಯಲ್ಲಿ ಅಂದಿನ ಮುಖ್ಯಮಂತ್ರಿಯಾಗಿದ್ದ ಹೆಚ್.ಡಿ. ದೇವೇಗೌಡರರಿಂದ ಸಪ್ತಾಹದ ಉದ್ಘಾಟನೆಯನ್ನು ಮಾಡಿಸಿದರು.

ಅಂದಿನಿಂದ ಸಹಕಾರ ಸಪ್ತಾಹವನ್ನು ರಾಜ್ಯಮಟ್ಟದ ಹಬ್ಬವನ್ನಾಗಿ ಆಚರಿಸಲಾಗುತ್ತಿದೆ. ಈ ವರ್ಷ ದಿನಾಂಕ : 17.11.2024ರಂದು ಬಾಗಲಕೋಟೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಸಹಕಾರಿ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದ ಸಹಕಾರ ಸಚಿವರಾದ ರಾಜಣ್ಣನವರು ಸಹಕಾರ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿದ ಸಹಕಾರಿಗಳಿಗೆ ಸಹಕಾರ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಶಾಸಕ ಡಾ. ಸಿದ್ದಲಿಂಗಪ್ಪ ಪಾಟೀಲ್, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಕರ್ನಾಟಕ ರಾಜ್ಯ ಸಹಕಾರ ಮಹಿಳಾ ಮಹಾಮಂಡಳದ ಅಧ್ಯಕ್ಷರಾದ ಶಕುಂತಲಾ ಬೆಲ್ದಾಳೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯ್ತಿ ಅಧ್ಯಕ್ಷರಾದ ಡಾ. ಗಿರೀಶ್ ಬಾದೋಳ್, ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬ ಶೆಟ್ಟಿ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ವಿ. ರಾಜು, ಕರ್ನಾಟಕ ಸಹಕಾರ ಮಹಾಮಂಡಳ ನಿರ್ದೇಶಕರುಗಳಾದ ಶೇಖರಗೌಡ ಮಾಲಿಪಾಟೀಲ್, ಉಮಾಕಾಂತ ನಾಗಮಾರಪಲ್ಲಿ, ಜೆ.ಎಂ. ಶಿವಪ್ರಸಾದ್, ಬಸವೇಶ್ವರ ಸುದ್ದಿ ಮಾಧ್ಯಮ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಗುರುನಾಥ ಜ್ಯಾಂತೀಕರ್, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಮಹಾಮಂಡಳದ ಉಪಾಧ್ಯಕ್ಷರಾದ ಬಿ.ಎಸ್. ಪರಮಶಿವಯ್ಯ, ಬೀದರ್ ಡಿಸಿಸಿ ಬ್ಯಾಂಕಿನ ಅಧ್ಯಕ್ಷರಾದ ಅಮರ ಕುಮಾರ್ ಬಿ. ಖಂಡ್ರೆ, ಕಲಬುರ್ಗಿ–ಯಾದಗಿರಿ ಡಿಸಿಸಿ ಬ್ಯಾಂಕಿನ ಅಧ್ಯಕ್ಷರಾದ ಸೋಮಶೇಖರ ಬಿ. ಗೋನಾಯಕ್, ರಾಯಚೂರು ಮತ್ತು ಕೊಪ್ಪಳ ಡಿಸಿಸಿ ಬ್ಯಾಂಕಿನ ಅಧ್ಯಕ್ಷರಾದ ವಿಶ್ವನಾಥ ಪಾಟೀಲ್, ಬೀದರ್ ಯೂನಿಯನ್ ಅಧ್ಯಕ್ಷರಾದ ಪರಮೇಶ್ವರ ವಿ. ಮುಗಟೆ, ಬಳ್ಳಾರಿ ಡಿಸಿಸಿ ಬ್ಯಾಂಕಿನ ಅಧ್ಯಕ್ಷರಾದ ಕೆ. ತಿಪ್ಪೇಸ್ವಾಮಿ, ಬೀದರ್ ಡಿಸಿಸಿ ಬ್ಯಾಂಕಿನ ಉಪಾಧ್ಯಕ್ಷರಾದ ಅಭಿಷೇಕ್ ಆರ್. ಪಾಟೀಲ್, ಕರ್ನಾಟಕ ರಾಜ್ಯ ಸಹಕಾರ ಗ್ರಾಹಕ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಆಶಾ ಕೆ.ಎಂ., ಪಟ್ಟಣ ಬ್ಯಾಂಕುಗಳ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಪುಂಡಲೀಕ ಕೆರೂರ, ಜಂಟಿ ನಿಬಂಧಕರಾದ ಪಿ. ಮಹೇಶ್, ಕಲ್ಬುರ್ಗಿ ಪ್ರಾಂತ್ಯ ಜಂಟಿ ನಿಬಂಧಕರಾದ ವಿಶ್ವನಾಥ ಮಲಕೂಡ, ಇಲಾಖಾ ಅಧಿಕಾರಿಗಳಾದ ಎಸ್., ಬಸಣ್ಣ ರಾಠೋಡ, ಡಾ. ನೀಲಾಂಬಿಕಾ, ಕಲಬುರಗಿ ಕೆಐಸಿಎಂನ ಪ್ರಾಂಶುಪಾಲರಾದ ಅರುಣಕುಮಾರ್ ಹರಸು, ಬೀದರ್ ಯೂನಿಯನ್ನಿನ ಸಿಇಒ ಎಚ್. ಆರ್. ಮಲ್ಲಮ್ಮ ಮತ್ತಿತರರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಪತ್ತಿನ ಮಹಾಮಂಡಳದ ಅಧ್ಯಕ್ಷರಾದ ಶ್ರೀ ವಿರಾಜು ರವರು, ನಿರ್ದೇಶಕರಾದ ಶ್ರೀ ಶೇಖರಗೌಡ ಮಾಲಿಪಾಟೀಲ ರವರು ಭಾಗವಹಿಸಿದ್ದರು.



## ಚಿಕ್ಕಮಗಳೂರಿನಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಭಾರತದ ಅಭಿವೃದ್ಧಿಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರ ಮಹಿಳೆಯರು, ಯುವ ಜನರು ಸಹಕಾರ ವಲಯದಲ್ಲಿ ಭಾಗವಹಿಸಲು ಉಪಸಭಾಪತಿ ಎಂ.ಕೆ. ಪ್ರಾಣೇಶ್ ಸಲಹೆ

- **ಯುವಜನರು, ಮಹಿಳೆಯರು ಸಹಕಾರಿ ಆಂದೋಲನದಲ್ಲಿ ಹೆಚ್ಚಾಗಿ ಭಾಗವಹಿಸಲಿ.**
- **ಸಹಕಾರ ಚಳವಳಿಯ ಬೆಳವಣಿಗೆಗೆ ಅಗತ್ಯವಿರುವ ಶಿಕ್ಷಣ, ತರಬೇತಿ ಹಾಗೂ ಪ್ರಚಾರದ ವ್ಯವಸ್ಥೆ, ಸಹಕಾರ ಮಹಾಮಂಡಳ ಪರಿಣಾಮಕಾರಿಯಾಗಿ ನಿರ್ವಹಿಸುತ್ತಿದೆ.**
- **ಸಹಕಾರ ಕ್ಷೇತ್ರದ ಕುರಿತು ವ್ಯಾಪಕವಾದ ಜನಜಾಗೃತಿ ಉಂಟು ಮಾಡುವ ಕೆಲಸವಾಗಬೇಕು.**
- **ಸಹಕಾರ ವಲಯದ ಮೂಲಕ ರೈತರ ಕೃಷಿ ಚಟುವಟಿಕೆಗೆ 5 ಲಕ್ಷದವರೆಗೆ ಶೂನ್ಯ ಬಡ್ಡಿದರದಲ್ಲಿ ಸಾಲ**
- **ಯಶಸ್ವಿನಿ ಯೋಜನೆಯಡಿ 42 ಸಾವಿರ ಸದಸ್ಯರು ಸುಮಾರು 75 ಕೋಟಿ ರೂ. ಮೊತ್ತದ ವಿವಿಧ ಚಿಕಿತ್ಸೆಗಳನ್ನು ಪಡೆದಿದ್ದಾರೆ.**

**ಚಿಕ್ಕಮಗಳೂರು:** ವಿಕಸಿತ ಭಾರತ ನಿರ್ಮಾಣದಲ್ಲಿ ಸಹಕಾರ ಸಂಸ್ಥೆಗಳ ಪಾತ್ರ ಮಹತ್ವದ್ದಾಗಿದೆ. ಈ ವರ್ಷದ ಸಪ್ತಾಹದ ಧ್ಯೇಯವನ್ನು ಸಾಕಾರಗೊಳಿಸಲು ಸಹಕಾರಿಗಳೆಲ್ಲರು ಕಾಯ, ವಾಚ, ಮನಸಾರೆ ಸೇವೆ ಸಲ್ಲಿಸಿ ಎಂದು ವಿಧಾನ ಪರಿಷತ್ ಉಪ ಸಭಾಪತಿ ಎಂ.ಕೆ ಪ್ರಾಣೇಶ್ ಅವರು ಸಲಹೆ ಮಾಡಿದರು.

ಸಹಕಾರ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕು, ಚಿಕ್ಕಮಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕು ಮತ್ತು ಚಿಕ್ಕಮಗಳೂರು ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಜಿಲ್ಲೆಯ ವಿವಿಧ ಸಹಕಾರ ಸಂಘಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 71ನೇ ಅಖಿಲ ಭಾರತ ಸಹಕಾರ ಸಪ್ತಾಹದ ಅಂಗವಾಗಿ "ಮಹಿಳೆಯರು, ಯುವಜನರು ಮತ್ತು ದುರ್ಬಲ ವರ್ಗಗಳಿಗೆ ಸಹಕಾರ ಸಂಸ್ಥೆಗಳು" ದಿನವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಮುಂದುವರೆದು ಮಾತನಾಡಿದ ಅವರು, ಸಹಕಾರಭಿವೃದ್ಧಿಗೆ ಅಗತ್ಯವಿರುವ ಸಹಕಾರ ಶಿಕ್ಷಣ, ತರಬೇತಿ ಹಾಗೂ ಪ್ರಚಾರದ ವ್ಯವಸ್ಥೆಯನ್ನು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಪರಿಣಾಮಕಾರಿಯಾಗಿ ನಿರ್ವಹಿಸುತ್ತಿದೆ. ಕೇಂದ್ರ ಸರ್ಕಾರ ಸಹಕಾರ ವಲಯದ ಬಲವರ್ಧನೆಗೆ ಈಗಾಗಲೇ ಪ್ರಮುಖ ಯೋಜನೆಗಳನ್ನು ಸಹಕಾರ ಸಚಿವಾಲಯದ ಮೂಲಕ ಜಾರಿಗೊಳಿಸುತ್ತಿದೆ. ಇದರ ಸದುಪಯೋಗವನ್ನು ಸಹಕಾರಿಗಳು ಪಡೆದು ಸಹಕಾರ ಚಳವಳಿಯ ಬಲವರ್ಧನೆಗೆ ಶ್ರಮಿಸಿ ಎಂದರು.

ಸಹಕಾರ ರಂಗದಲ್ಲಿ ಮಹಿಳೆಯರು, ಯುವ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಅಗತ್ಯವಿದೆ. ಇದರಿಂದ ಚಳವಳಿಯ ವೇಗ ಹೆಚ್ಚಾಗಲಿದೆ. ನಿಗದಿತ ಗುರಿಯೊಂದಿಗೆ ಸಹಕಾರ ಕ್ಷೇತ್ರ ಮುಂದೆ ಸಾಗಲಿ. ಸರ್ಕಾರದ ಹಲವಾರು ಜನಪರ ಯೋಜನೆಗಳು ಸಹಕಾರ ಕ್ಷೇತ್ರದ ಮೂಲಕ ಜನತೆಗೆ ತಲುಪುತ್ತಿವೆ. ಈ ವಲಯವನ್ನು ಸಮರ್ಪಕವಾಗಿ ಬಳಸಿಕೊಂಡು ಮುನ್ನಡೆದರೆ ಪ್ರತಿಯೊಬ್ಬರಿಗೂ ಯಶಸ್ಸು ಗಳಿಸಲು

ಸಾಧ್ಯವಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ಎಚ್.ಡಿ. ತಮ್ಮಯ್ಯ ಅವರು ವಹಿಸಿದ್ದರು. ನಂತರ ಅವರು ಮಾತನಾಡಿ ಸಹಕಾರ ಚಳವಳಿಯನ್ನು ಕಾನೂನಾತ್ಮಕವಾಗಿ ಜಾರಿಗೆ ತಂದವರು ಕಣಗಿನಹಾಳ ಗ್ರಾಮದ ಶಿದ್ದನಗೌಡ ಸಂಣರಾಮನಗೌಡ ಪಾಟೀಲರು. ರೈತರ ಸ್ವಾವಲಂಬಿ ಬದುಕಿಗೆ ಪೂರಕವಾಗಿ ಆರಂಭವಾದ ಸಹಕಾರ ಕ್ಷೇತ್ರ ಇಂದು ಬೃಹದಾಕಾರವಾಗಿ ಬೆಳೆದಿದೆ. ವಿವಿಧ ರೀತಿಯ ಸಹಕಾರ ಸಂಘಗಳು ಚಳವಳಿಯ ದಿಕ್ಕನ್ನೇ ಬದಲಿಸಿವೆ. ಚಿಕ್ಕಮಗಳೂರು ಜಿಲ್ಲೆಯೂ ಸಹ ಸಹಕಾರ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿದ್ದು, ವಿವಿಧ ರೀತಿಯ ಸಹಕಾರ ಸಂಘಗಳ ಮೂಲಕ ಜನರ ಸ್ವಾವಲಂಬಿ ಬದುಕಿನ ಆಸರೆಯಾಗಿ ಚಳವಳಿ ಬೆಳೆದಿದೆ. ಕೃಷಿಕರ ಸ್ವಾಲಂಬಿ ಬದುಕಿಗೆ ಸಹಕಾರ ಕ್ಷೇತ್ರ ವರದಾನವಾಗಿದೆ ಎಂದರು. ಸಹಕಾರ ಕ್ಷೇತ್ರದಲ್ಲಿ ಹಿನ್ನಡೆ ಕಂಡಿರುವ ಸಹಕಾರ ಸಂಸ್ಥೆಗಳನ್ನು ಬಲಪಡಿಸುವ ಕೆಲಸವಾಗಬೇಕಿದೆ ಎಂದು ಅವರು ನುಡಿದರು.

ಸಹಕಾರ ವಾರಪತ್ರಿಕೆಯ ವಿಶೇಷ ಸಂಚಿಕೆ ಬಿಡುಗಡೆಗೊಳಿಸಿದ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ಉಪಾಧ್ಯಕ್ಷರಾದ ಉಳವಪ್ಪ ತಿಪ್ಪಣ್ಣ ದಾಸನೂರು ಅವರು ಮಾತನಾಡಿ, ಸಹಕಾರಿ ಚಳವಳಿ ಮತ್ತು ವ್ಯವಸ್ಥೆ ಕುರಿತು ಜನಜಾಗೃತಿ ಉಂಟು ಮಾಡುವುದೇ ಸಪ್ತಾಹದ ಉದ್ದೇಶ ಎಂದು ತಿಳಿಸಿದರು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಹಕಾರಿಗಳಿಗೆ ಅನುಕೂಲವಾಗುವ ಅನೇಕ ಸವಲತ್ತುಗಳನ್ನು ಒದಗಿಸಿ ಹೆಮ್ಮರವಾಗಿ ಬೆಳೆಸಲು ಸಹಕರಿಸುತ್ತಿವೆ. ವಿಶೇಷವಾಗಿ ರಾಜ್ಯ ಸರ್ಕಾರ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ರೂ. 5 ಲಕ್ಷದವರೆಗೆ ಹಾಗೂ ಶೇ.3ರ ಬಡ್ಡಿ ದರದಲ್ಲಿ 15 ಲಕ್ಷದವರೆಗೆ ಬೆಳೆ ಸಾಲ ಸೌಲಭ್ಯವನ್ನು ಒದಗಿಸಿ ಆಹಾರ ಭದ್ರತೆ ಹಾಗೂ ಆರ್ಥಿಕ ಅಭಿವೃದ್ಧಿಗೆ ನೆರವಾಗುತ್ತಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್. ನವೀನ್ ಅವರು ಮಾತನಾಡಿ, ವಿಕಸಿತ ಭಾರತ ನಿರ್ಮಾಣದಲ್ಲಿ ಸಹಕಾರ ಸಂಘಗಳ ಪಾತ್ರ ಮಹತ್ತರವಾದುದು, ಈಗಾಗಲೇ ಸಹಕಾರ ಕ್ಷೇತ್ರ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದು, ಕೃಷಿ, ಕೃಷಿಯೇತರ ಪತ್ತು, ಪಟ್ಟಣ ಬ್ಯಾಂಕಿಂಗ್, ಹೈನುಗಾರಿಕೆ ವಲಯಗಳು ಉತ್ತಮವಾಗಿ ಸೇವೆ ಸಲ್ಲಿಸುತ್ತಿವೆ. ರಾಷ್ಟ್ರದ ಹಾಗೂ ರಾಜ್ಯದ ಸಹಕಾರ ಚಳವಳಿ ಉತ್ತಮ ಪ್ರಗತಿ ಹೊಂದಿದೆ. ಈ ವ್ಯವಸ್ಥೆಯ ಕುರಿತು ಜನರಲ್ಲಿ ಹೆಚ್ಚು ವಿಶ್ವಾಸ ಮೂಡಿಸಬೇಕು. ಸಹಕಾರ ವ್ಯವಸ್ಥೆಯ ಬಗ್ಗೆ ಜನರಲ್ಲಿ ಸದಾಭಿಪ್ರಾಯ ಮೂಡಿಸಲು ಸಪ್ತಾಹ ಒಂದು ವೇದಿಕೆಯಾಗಿದೆ. ಆದ್ದರಿಂದ ಏಳು ದಿನಗಳು ನಡೆಯುವ ಕಾರ್ಯಕ್ರಮ ಅರ್ಥಪೂರ್ಣವಾಗಿವೆ ಎಂದರು.

ಸಹಕಾರ ಸಂಘಗಳ ಅಪರ ನಿಬಂಧಕರಾದ ಎಚ್. ಬಾಲಶೇಖರ್ ಮಾತನಾಡಿ, ಸಹಕಾರಿಗಳು ಆರ್ಥಿಕ ಪ್ರಗತಿ ಹೊಂದುವ ನಿಟ್ಟಿನಲ್ಲಿ ಪ್ರಸಕ್ತ ವರ್ಷ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ 35 ಲಕ್ಷ ರೈತರಿಗೆ ಸುಮಾರು ರೂ. 27 ಸಾವಿರ ಕೋಟಿ ಸಾಲವನ್ನು ವಿತರಿಸುವ ಗುರಿಯನ್ನು ಸರ್ಕಾರ ಹೊಂದಿದೆ. ಪ್ರಸ್ತುತ ರಾಜ್ಯದಲ್ಲಿ 41 ಲಕ್ಷ ಮಂದಿ ಯಶಸ್ವಿನಿ ಯೋಜನೆಯಡಿ ಫಲಾನುಭವಿಗಳನ್ನು ನೊಂದಾಯಿಸಿದ್ದು ಈವರೆಗೆ 42 ಸಾವಿರ ಫಲಾನುಭವಿಗಳು ಸುಮಾರು ರೂ. 75 ಕೋಟಿ ಮೊತ್ತದ ವಿವಿಧ ಚಿಕಿತ್ಸೆಗಳನ್ನು ಪಡೆದು ಗುಣಮುಖರಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್, ಪರಿಸರ ತಜ್ಞರ ಮೌಲ್ಯ ಮಾಪನ ಸಮಿತಿ ಅಧ್ಯಕ್ಷರಾದ ಎ.ಎನ್. ಮಹೇಶ್, ಕಾಡಾ ನಿಗಮದ ಅಧ್ಯಕ್ಷರಾದ ಡಾ. ಅಂಶುಕುಮಾರ್, ರಾಜ್ಯ ಸಹಕಾರ ಸಕ್ಕರೆ ಕಾರ್ಖಾನೆಗಳ ಮಹಾಮಂಡಳ ಅಧ್ಯಕ್ಷರಾದ ಸಿ.ಎಸ್. ವೆಂಕಟೇಶ್, ರಾಜ್ಯ ಅಡಿಕೆ ಸಹಕಾರ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ ವೈ.ಎಸ್. ಸುಬ್ರಹ್ಮಣ್ಯ, ಕಾಸ್ಕಾರ್ಡ್ ಬ್ಯಾಂಕ್ ನಿರ್ದೇಶಕರಾದ ಈ.ಆರ್. ಮಹೇಶ್, ಮಾರಾಟ ಮಹಾಮಂಡಳದ ನಿರ್ದೇಶಕರಾದ ಹೆಚ್.ಕೆ. ದಿನೇಶ್, ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಬಿ.ಸಿ. ಲೋಕಪ್ಪ ಗೌಡ, ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷರಾದ ಜಿ.ಕೆ. ದಿವಾಕರ, ನಿರ್ದೇಶಕರುಗಳಾದ ಬಿ.ಸಿ. ಗೀತಾ, ಪಿ. ಶಶಿಕುಮಾರ್, ಬಿ.ಟಿ. ರಾಮಚಂದ್ರಪ್ಪ, ಟಿ. ಧನಪಾಲ್, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿರ್ದೇಶಕರಾದ ಎಚ್.ಬಿ. ಶಿವಣ್ಣ, ಎಂ.ಎಸ್. ನಿರಂಜನ್, ಎಸ್. ಎನ್, ರಾಮಸ್ವಾಮಿ, ಹೆಚ್.ಬಿ. ಸತೀಶ್, ಡಿ.ಸಿ. ಶಂಕರಪ್ಪ, ಟಿ.ಎಲ್. ರಮೇಶ್, ಸಿ.ಎಸ್. ರಂಗನಾಥ್, ಕೆ.ಆರ್. ಆನಂದಪ್ಪ, ಎಸ್.ಜಿ. ರಾಮಪ್ಪ, ಹೆಚ್.ವಿ. ಸಂದೀಪ್ ಕುಮಾರ್, ಎಂ. ಪರಮೇಶ್ವರಪ್ಪ, ಯೂನಿಯನ್ ನಿರ್ದೇಶಕರುಗಳಾದ ಕೆ.ಟಿ. ವೆಂಕಟೇಶ್, ಸಿ.ಎಸ್. ವೇಣುಗೋಪಾಲ್, ಹೆಚ್.ಎಸ್. ಇನೇಶ್, ಜಿ.ವಿ. ಮೋಹನ್, ಸಿ.ಹೆಚ್. ಕುಶಕುಮಾರ್, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷರಾದ ಸಿ.ಎಸ್. ರಂಗನಾಥ್, ಹಾಸನ ಹಾಲು ಒಕ್ಕೂಟದ ನಿರ್ದೇಶಕರಾದ ಟಿ.ಕೆ. ಜಗದೀಶ್, ಹೆಚ್.ಟಿ. ಆಶಾ, ಸೋನಾಲ್‌ಗೌಡ, ಮ್ಯಾಮ್‌ಕೋಸ್ ಉಪಾಧ್ಯಕ್ಷರಾದ ಮಹೇಶ್. ಹೆಚ್.ಎಸ್, ವಿವಿಧ ತಾಲ್ಲೂಕುಗಳ ಪೀಕಾರ್ಡ್ ಬ್ಯಾಂಕುಗಳ ಅಧ್ಯಕ್ಷರುಗಳಾದ ಎನ್.ಟಿ. ಗೋಪಾಲಕೃಷ್ಣ, ಎ.ಎಸ್. ನಯನ, ಪುಷ್ಪಲತಾ, ನಾಗರಾಜ್, ರಂಗನಾಥ್ ಎನ್., ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್. ನವೀನ್, ಕಾಸ್ಕಾರ್ಡ್ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕರಾದ ಬಿ.ಸಿ. ಸತೀಶ್, ಅಪರ ನಿಬಂಧಕರಾದ ಹೆಚ್. ಬಾಲಶೇಖರ್, ಜಂಟಿ ನಿಬಂಧಕರಾದ ಪ್ರಸಾದ್ ರೆಡ್ಡಿ, ಚಿಕ್ಕಮಗಳೂರು ಡಿಸಿಸಿ ಬ್ಯಾಂಕಿನ ಮುಖ್ಯಕಾರ್ಯನಿರ್ವಹಣಾಧಿಕಾರಿ ಜಿ. ತಿಮ್ಮಪ್ಪ, ಹಾಸನ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಹೆಚ್. ಮಹೇಶ್, ಚಿಕ್ಕಮಗಳೂರು ಸ.ಸಂ. ಉಪನಿಬಂಧಕರಾದ ಡಾ. ಡಿ.ಎಸ್. ತೇಜಸ್ವಿನಿ, ಕಾರ್ಯಕ್ರಮ ಸಮನ್ವಯಾಧಿಕಾರಿಗಳಾದ ಎಸ್. ಎನ್. ವೇಣುಗೋಪಾಲ್, ಡಾ. ಆರ್.ಎಸ್. ರೇಣುಕಾ, ಚಿಕ್ಕಮಗಳೂರು ಜಿಲ್ಲಾ ಸಹಕಾರ ಯೂನಿಯನ್ ಸಿಇಒ ಯಶಸ್ಸು ಹೆಚ್.ಕೆ. ಮತ್ತಿತರರು ಉಪಸ್ಥಿತರಿದ್ದರು.



## 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ

# ರೈತರ ಸ್ವಾವಲಂಬಿ ಬದುಕಿಗೆ ಸಹಕಾರ ಕ್ಷೇತ್ರ ಪೂರಕ
# ಸಹಕಾರ ಚಳವಳಿಯ ಪರಿಣಾಮಕಾರಿ ಬೆಳವಣಿಗೆಗೆ ಸಹಕಾರಿಗಳೆಲ್ಲರೂ ಶ್ರಮಿಸಲು ಸಹಕಾರ ಸಚಿವ ಕೆ.ಎನ್. ರಾಜಣ್ಣ ಸಲಹೆ

**ಬೆಳಗಾವಿ** : 'ಸಹಕಾರಿ ಆಂದೋಲನ ಸಾರ್ವಜನಿಕರ ಆಂದೋಲನವಾಗಿದೆ. ಕೃಷಿ ಪತ್ತಿನ ಸಹಕಾರಿ ಸಂಘಗಳು ಗ್ರಾಮೀಣ ಭಾಗದ ರೈತರ ಸಂಕಷ್ಟ ಕಾಲದಲ್ಲಿ ಕೈ ಹಿಡಿದಿವೆ. ಕೃಷಿ ಪತ್ತಿನ ಸಹಕಾರಿ ವ್ಯವಸ್ಥೆ ಇಲ್ಲದೆ ಹೋಗಿದ್ದರೆ ರೈತರು ಆರ್ಥಿಕವಾಗಿ ಸಂಕಷ್ಟಕ್ಕೆ ಒಳಗಾಗುತ್ತಿದ್ದರು. ರೈತರಿಗೆ ಆರ್ಥಿಕ ಊರುಗೋಲಾಗಿ ಸಹಕಾರಿ ಕ್ಷೇತ್ರ ಕಾರ್ಯನಿರ್ವಹಿಸುತ್ತಿದೆ' ಎಂದು ಸಹಕಾರ ಸಚಿವ ಕೆ.ಎನ್ ರಾಜಣ್ಣ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ, ಬೆಳಗಾವಿ ಜಿಲ್ಲಾ ಸಹಕಾರ ಯೂನಿಯನ್, ಜಿಲ್ಲೆಯ ವಿವಿಧ ಸಹಕಾರ ಸಂಘಗಳ ಸಹಯೋಗದಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

120 ವರ್ಷಗಳ ಹಿಂದೆ ಭಾರತದಲ್ಲಿ ಆರಂಭಗೊಂಡ ಸಹಕಾರ ಚಳವಳಿ ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿದ್ದು, ಈ ಕ್ಷೇತ್ರದ ಬೆಳವಣಿಗೆಗೆ ಸಹಕಾರಿಗಳೆಲ್ಲರೂ ಬದ್ಧತೆಯಿಂದ ಕಾರ್ಯನಿರ್ವಹಿಸುವ ಮೂಲಕ ಚಳವಳಿಯನ್ನು ಮತ್ತಷ್ಟು ಬಲಿಷ್ಠಗೊಳಿಸಿ ಎಂದು ತಿಳಿಸಿದರು.

ಸಹಕಾರ ಸಂಘಗಳು ಸಾಲ ನೀಡದೆ ಹೋದರೆ ರಾಜ್ಯದ ಸಕ್ಕರೆ ಕಾರ್ಖಾನೆಗಳು ಆರ್ಥಿಕವಾಗಿ ಹಿಂದುಳಿಯುತ್ತಿದ್ದವು. ರಾಜ್ಯದ ಅಪೆಕ್ಸ್ ಬ್ಯಾಂಕ್ ಹಾಗೂ ಡಿಸಿಸಿ ಬ್ಯಾಂಕುಗಳು ಸಕ್ಕರೆ ಕಾರ್ಖಾನೆಗಳಿಗೆ ಆರ್ಥಿಕ ನೆರವು ನೀಡಿ ಬೆಂಬಲವಾಗಿ ನಿಂತಿವೆ. ಈಗಾಗಲೇ ರಾಜ್ಯದಲ್ಲಿ ಸಹಕಾರ ಕ್ಷೇತ್ರ ಪ್ರಗತಿಯತ್ತ ಸಾಗುತ್ತಿದ್ದು, ಇನ್ನಷ್ಟು ಅಭಿವೃದ್ಧಿಪಡಿಸುವ ಜವಾಬ್ದಾರಿ ನಮ್ಮ ಮೇಲಿದೆ. ಹಾಗಾಗಿ ಪ್ರಾಮಾಣಿಕವಾಗಿ ಜನಪರ ಸಹಕಾರ ಕ್ಷೇತ್ರವಾಗಿ ದೇಶದಲ್ಲೇ ಆರ್ಥಿಕವಾಗಿ ಮುಂಚೂಣಿಗೆ ಬರಲಿದೆ ಎಂದು ಹೇಳಿದರು.

ರೈತರ ಉತ್ಪಾದಿತ ವಸ್ತುಗಳಿಗೆ ಬೆಲೆ ನಿಗದಿಯಾಗಬೇಕು ಇದರಿಂದ ರೈತರಿಗೆ ಆರ್ಥಿಕ ಶಕ್ತಿ ಬರಲಿದೆ. ರೈತರಿಗೆ ವಿವಿಧ ಸೌಲಭ್ಯಗಳನ್ನು ಸರಳವಾಗಿ ಒದಗಿಸುವ ನಿಟ್ಟಿನಲ್ಲಿ ಸಹಕಾರ ಕ್ಷೇತ್ರ ಮುನ್ನಡೆಯುತ್ತಿದೆ. "ನಾನು ಎಲ್ಲರಿಗಾಗಿ ಎಲ್ಲರೂ ನನಗಾಗಿ" ಎಂಬ ಧ್ಯೇಯವಾಕ್ಯದೊಂದಿಗೆ ಸಹಕಾರ ಕ್ಷೇತ್ರ ಬಂದಿದೆ. ರೈತರನ್ನು ಸಶಕ್ತರನ್ನಾಗಿಸುವ ಜವಾಬ್ದಾರಿಯಿಂದ ಸಹಕಾರ ಕ್ಷೇತ್ರದ ಮೂಲಕ ಶೂನ್ಯ ಬಡ್ಡಿದರದಲ್ಲಿ ರೂ. 5 ಲಕ್ಷದವರೆಗೆ ಸಾಲ ವಿತರಿಸಲಾಗುತ್ತಿದೆ. ಇದಕ್ಕಾಗಿ ಹಿಂದಿನ ವರ್ಷ ನಬಾರ್ಡ್‌ನಿಂದ 5600 ಕೋಟಿ ರೂ. ಪುನರ್ಧನ ಬಡ್ಡಿ ರಿಯಾಯಿತಿ ಮಿತಿಯಲ್ಲಿ ಬಂದಿತ್ತು. ಆದರೆ ಈ ಬಾರಿ ನಬಾರ್ಡ್ 2340 ಕೋಟಿ ರೂ. ಮಾತ್ರ ಪುನರ್ಧನ ಬಡ್ಡಿ ರಿಯಾಯಿತಿಯಲ್ಲಿ ಹಣ ಬಿಡುಗಡೆಯಾಗಿದ್ದು, ಇನ್ನೂ ಹೆಚ್ಚಿನ ನೆರವು ನೀಡಿದರೆ, ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲ ದೊರೆಯಲಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ಹೇಳಿದರು.

ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿಯವರು ಮಾತನಾಡಿ, ಬೆಳಗಾವಿ ಸಹಕಾರ ರಂಗದ ತವರು ಜಿಲ್ಲೆಯಾಗಿದೆ. ಅತೀ ಹೆಚ್ಚು ಸಹಕಾರ ಸಂಘಗಳನ್ನು ಹೊಂದಿರುವ ಬೆಳಗಾವಿಯಲ್ಲಿ ರೈತರಿಗೆ, ಪರಿಶಿಷ್ಟ ಜಾತಿ, ಪಂಗಡದ ವರ್ಗದವರಿಗೆ ವಿವಿಧ ಯೋಜನೆಗಳನ್ನು ಸಹಕಾರಿ




ಸಂಘಗಳು ತಲುಪಿಸುತ್ತಿವೆ. ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ರೂ. 5 ಲಕ್ಷ ವರೆಗೆ ಸಾಲ ಸೌಲಭ್ಯ ನೀಡಲಾಗುತ್ತಿದೆ ಎಂದರು.

ಸಹಕಾರ ಚಳವಳಿ ಇಂದಿನ ಗದಗ ಜಿಲ್ಲೆಯಲ್ಲಿ ಪ್ರಾರಂಭವಾಗಿ ಪಸ್ತುತ ದಿನಮಾನಗಳಲ್ಲಿ ಸಹಕಾರ ರಂಗ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ಚಂದರಗಿಯಲ್ಲಿ ಸಹಕಾರಿ ಶಾಲೆ ದೇಶದಲ್ಲೇ ಮಾದರಿಯಾಗಿದೆ. ಸಹಕಾರ ರಂಗದಲ್ಲಿ ಸದಸ್ಯರ ಆಯ್ಕೆಯ ಮಾನದಂಡ ಬದಲಾಗಬೇಕಿದೆ. ಇನ್ನಷ್ಟು ಸುಲಭ ಮಾರ್ಗದಲ್ಲಿ ಸಹಕಾರ ಸಂಘಗಳ ಸದಸ್ಯರ ಆಯ್ಕೆ ನಿಯಮಗಳನ್ನು ರೂಪಿಸಬೇಕು. ಜಮೀನು ಪಹಣಿ ಹೊಂದಿದ ರೈತರಿಗೆ ಸದಸ್ಯತ್ವ ದೊರೆಯುವ ನಿಟ್ಟಿನಲ್ಲಿ ಡಿಜಿಟಲ್ ಮೂಲಕ ಸದಸ್ಯರ ಆಯ್ಕೆ ಪ್ರಕ್ರಿಯೆ ನಡೆಸಬೇಕು ಎಂದು ಸಚಿವರು ಹೇಳಿದರು. ರೈತರಿಗೆ ಸುಲಭವಾಗಿ ಹೆಚ್ಚು ಸಾಲ ಸೌಲಭ್ಯ ನೀಡಲು ಸರಳೀಕರಣ ಮಾದರಿಯನ್ನು ಅನುಸರಿಸಬೇಕು. ಈ ಪಕ್ರಿಯೆಯನ್ನು ಎಲ್ಲಾ ಸಹಕಾರಿ ಸಂಘಗಳು ನಿಯಮಾನುಸಾರ ಕಾನೂನು ಚೌಕಟ್ಟಿನಲ್ಲಿ ಜಾರಿಗೆ ತರಬೇಕು. ಜಿಲ್ಲೆಯ ಎಲ್ಲಾ ರೈತರಿಗೆ ವಿವಿಧ ಸಹಕಾರಿ ಬ್ಯಾಂಕುಗಳಿಂದ ರೈತರಿಗೆ ಸೌಲಭ್ಯಗಳನ್ನು ಒದಗಿಸುವ ಚಿಂತನೆಗಳನ್ನು ಬೆಳಸಿಕೊಳ್ಳಬೇಕು. ರೈತರು ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಸಹಕಾರ ಸಂಘಗಳು ಸದಾ ಬೆಂಬಲವಾಗಿ ನಿಂತಿವೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಕೆ.ಎಲ್.ಇ. ಸಂಸ್ಥೆಯ ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ ಮಾತನಾಡಿ, ಉತ್ತರ ಕರ್ನಾಟಕದ ಭಾಗದ ಜನರು ಸಹಕಾರ ಸಂಘದಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಯಾವುದೇ ತಾರತಮ್ಯ ಇಲ್ಲದೇ ನಿಷ್ಠಾವಂತ ಸೇವೆ ಸಲ್ಲಿಸುತ್ತಿದ್ದಾರೆ. ಸಹಕಾರ ಚಳವಳಿ ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಬೇಕಿದೆ. ಸಹಕಾರಿ ಸಂಘಗಳಿಂದ ದೇಶದ ಆರ್ಥಿಕತೆಗೆ ಬಹಳಷ್ಟು ಬಲ ಬಂದಿದೆ. ಈ ಕ್ಷೇತ್ರದ ಪರಿಣಾಮಕಾರಿ ಬೆಳವಣಿಗೆಗೆ ಸಹಕಾರಿ ವಿಶ್ವವಿದ್ಯಾಲಯ ಸ್ಥಾಪನೆಯಾಗಬೇಕು ಅದೇ ರೀತಿಯಲ್ಲಿ ಜಿಲ್ಲೆಯಲ್ಲಿ ಸಹಕಾರ ಮಹಾವಿದ್ಯಾಲಯವಾಗಬೇಕು. ಈ ಮೂಲಕ ಸಹಕಾರಿ ಆಂದೋಲನದಲ್ಲಿ ಯುವ ನಾಯಕತ್ವ ಹೆಚ್ಚಾಗಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾತನಾಡಿ, ಸಹಕಾರ ಕ್ಷೇತ್ರವಿಲ್ಲದೆ ರೈತರ ಪ್ರಗತಿ ಸಾಧ್ಯವಿಲ್ಲ. ಸಾಲದ ನೆರವು ನೀಡದೆ ಹೋದರೆ ರೈತಾಪಿ ವರ್ಗಕ್ಕೆ ಆರ್ಥಿಕ ಕಷ್ಟವಾಗುತ್ತಿತ್ತು. ಮಹಿಳೆಯರು ಹಾಗೂ ಯುವಜನರ ಸ್ವಾವಲಂಬನೆಯಲ್ಲೂ ಈ ಕ್ಷೇತ್ರ ಮಹತ್ವ ಪಡೆದುಕೊಂಡಿದೆ. ಸಹಕಾರ ಸಂಘಗಳು ಜನರ ವಿಶ್ವಾಸ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಶಾಸಕರಾದ ಲಕ್ಷ್ಮಣ ಸವದಿ ಅವರು ಮಾತನಾಡಿ, ಸಹಕಾರ ಕ್ಷೇತ್ರದ ಬೆಳವಣಿಗೆಗೆ ಪೂರಕವಾಗಿ ಸಹಕಾರ ಸಪ್ತಾಹದ ಮೂಲಕ ವಿಚಾರ ವಿನಿಮಯ, ಚಿಂತನ–ಮಂಥನ ಕಾರ್ಯಕ್ರಮಗಳು ನಡೆಯುತ್ತಿವೆ. ಬೆಳಗಾವಿ ಜಿಲ್ಲೆ ಕಬ್ಬು ಬೆಳೆಯಲ್ಲಿ ಮುಂಚೂಣಿಯಲ್ಲಿದ್ದು, ಸಹಕಾರ ಸಕ್ಕರೆ ಕಾರ್ಖಾನೆಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ನಮ್ಮ ರಾಜ್ಯದ ಸಹಕಾರ ಕ್ಷೇತ್ರ ರಾಷ್ಟ್ರದಲ್ಲಿಯೇ ಮುಂಚೂಣಿಯಲ್ಲಿ ಗುರುತಿಸಿಕೊಂಡಿದ್ದು, ಕೇಂದ್ರ ಸರ್ಕಾರದ ಹೊಸ ಯೋಜನೆಯಾದ ಕಬ್ಬಿನಿಂದ ಎಥನಾಲ್ ಉತ್ಪಾದನೆಗೆ ಸಹಕಾರ ಕ್ಷೇತ್ರ ಪ್ರಮುಖ ಪಾತ್ರ ವಹಿಸಲಿದೆ. ಮುಂದಿನ ದಿನಗಳಲ್ಲಿ ದೇಶದ ಆರ್ಥಿಕತೆಗೆ ಸಹಕಾರ ಕ್ಷೇತ್ರ ಪ್ರಮುಖ ಕೊಡುಗೆ ನೀಡಲಿದ್ದು, ದೇಶದ ಆರ್ಥಿಕತೆಯ ಬಹುಮುಖ್ಯ ವಲಯವಾಗಿ ಈ ಕ್ಷೇತ್ರ ಹೊರಹೊಮ್ಮಲಿದೆ ಎಂದರು.

**ವಿಶೇಷ ಸಂಚಿಕೆ ಬಿಡುಗಡೆ :** ಕಾರ್ಯಕ್ರಮದಲ್ಲಿ ಸಹಕಾರ ಸಚಿವ ಕೆ.ಎನ್. ರಾಜಣ್ಣ. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸಹಕಾರ ಮಹಾಮಂಡಳ ಪ್ರಕಟಿತ ಸಹಕಾರ ವಾರಪತ್ರಿಕೆ ಹಾಗೂ ಸೌಹಾರ್ದ ಸಹಕಾರಿಯ ವಿಶೇಷ ಸಂಚಿಕೆಗಳನ್ನು ಬಿಡುಗಡೆ ಮಾಡಿದರು.

ಶಾಸಕರು ಹಾಗೂ ಸರ್ಕಾರದ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಶಾಸಕ ಆಸೀಫ್ (ರಾಜು) ಸೇಠ್, ಶಾಸಕ ದುರ್ಯೋಧನ ಐಹೊಳೆ, ರಾಜ್ಯ ಸಭಾ ಸದಸ್ಯ ಈರಣ್ಣ ಕಡಾಡಿ, ಬುಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಪ್ಪಾಸಾಹೇಬ ಕುಲಗುಡೆ. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಉಪಾಧ್ಯಕ್ಷರಾದ ಜಗದೀಶ ಕವಟಗಿಮಠ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ, ಬೆಳಗಾವಿ ಪ್ರಾಂತ್ಯ ಜಂಟಿ ನಿಬಂಧಕರಾದ ಡಾ. ಎಸ್. ಸುರೇಶ್‌ಗೌಡ, ಮಹಾಮಂಡಳದ ನೋಡೆಲ್ ಅಧಿಕಾರಿಗಳಾದ ಲಕ್ಷ್ಮೀಕಾಂತ್ ಕಟ್ಟಿಮನಿ ಹಾಗೂ ಬಿ.ವಿ. ಶೈಲಾ, ಡಿಸಿಸಿ ಬ್ಯಾಂಕ್, ಜಿಲ್ಲಾ ಹಾಲು ಒಕ್ಕೂಟ, ಸಹಕಾರ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಗಳ ನಿರ್ದೇಶಕರು, ಸದಸ್ಯರು, ಸಹಕಾರ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.